# ನಮ್ಮ ಜನ
# NAMMA JANA

ಸಂಪಾದಕರು: ದರ್ಶನ್.ಟಿ
Editor : DARSHAN.T

ಕನ್ನಡ ದಿನ ಪತ್ರಿಕೆ
Kannada Daily

ಸಂಪುಟ – 02 ಸಂಚಿಕೆ – 38
Volume - 02 Issue - 38
ಶೀರ್ಷಿಕೆ ಕೋಡ್: ಕೆಎಆರ್ ಕೆಎಎನ್ 28269
Title- Code: KARKAN 28269
ಚಿತ್ರದುರ್ಗ
Chitradurga
ದಿನಾಂಕ: 22–08–2024 ಗುರುವಾರ
Date: 22-08-2024 Thursday
ಪುಟ: 4
Page: 4
ಬೆಲೆ : ರೂ.2–00
Price: Rs. 2-00



ಒಳಪುಟದ ಸುದ್ದಿಗಳು

ಆ.27ರಂದು ಗೆಜೆಟೆಡ್ ಪ್ರೊಬೆಷನರ್ಸ್ ಸ್ಪರ್ಧಾತ್ಮಕ ಪರೀಕ್ಷೆ 2

ಚಿತ್ರದುರ್ಗ ತಹಶೀಲ್ದಾರ್ ಕಚೇರಿಯಲ್ಲಿ ಉಚಿತ ಕಾನೂನು ಸಲಹಾ ಕೇಂದ್ರ ಆರಂಭ 3

ಹತ್ತನೆ ತರಗತಿ 6 ವಿದ್ಯಾರ್ಥಿಗಳು ವಸತಿ ನಿಲಯದಿಂದ ನಾಪತ್ತೆ 4



ಸುದ್ದಿ, ಜಾಹಿರಾತಿಗೆ
9686622252


### ಶುಭ ನುಡಿ

ಬಟ್ಟೆ ನೋಡಿ ಗೆಳೆತನ ಮಾಡಬೇಡ,
ಗುಣ ನೋಡಿ ಗೆಳೆತನ ಮಾಡು ,
ಯಾಕೆಂದರೆ ಬಟ್ಟೆ ಹರಿದು ಹೋಗುವ
ತನಕ ಮಾತ್ರ ಇರುತ್ತದೆ, ಗುಣ
ಸಾಯುವವರೆಗೂ ಇರುತ್ತದೆ !!

» ಶುಭೋದಯ

## ಚಳ್ಳಕೆರೆ ತಾಲ್ಲೂಕಿನಾದ್ಯಂತ ಮಳೆಯ ಅವಾಂತರ

# ನೂರಾರು ಎಕರೆ ಬೆಳೆ ಜಲಾವೃತ

» **ಚಳ್ಳಕೆರೆ**

ತಾಲ್ಲೂಕಿನಾದ್ಯಂತ ಆ.20ರ ನಡುರಾತ್ರಿ ಬಿದ್ದ ಮಳೆ ನಿರೀಕ್ಷೆಗೂ ಮೀರಿ ಅನಾಹುತ ಸೃಷ್ಠಿಸಿದೆ. ಗ್ರಾಮಾಂತರ ಪ್ರದೇಶವೂ ಸೇರಿದಂತೆ ನಗರದಾದ್ಯಂತ ಮಖೆ ಮಳೆಗೆ ಜನರ ಜೀವನ ತತ್ತರಿಸಿದೆ.

ದಿಢೀರನೇ ಆಗಮಿಸಿದ ಮಳೆ ಗ್ರಾಮೀಣ ಭಾಗದ ಜನರಿಗೆ ವರವಾಗುವ ಬದಲು ಶಾಪವಾಗಿ ಪರಿಣಮಿಸಿದೆ ಎಂದರೆ ತಪ್ಪಿಲ್ಲ. ಮನಮೈನಹಟ್ಟಿ ಗ್ರಾಮದಲ್ಲಿ ಕೆರೆ ಕೋಡಿಬಿದ್ದು 50ಕ್ಕೂ ಹೆಚ್ಚು ಮನೆಗಳಿಗೆ ನೀರು ನುಗ್ಗಿದ್ದು, ಜಿಲ್ಲಾಧಿಕಾರಿ ಟಿ.ವೆಂಕಟೇಶ್, ತಹಶೀಲ್ದಾರ್ ರೇಹಾನ್‌ಪಾಷ ಮತ್ತು ಸಿಬ್ಬಂದಿ ಭೇಟಿ ನೀಡಿದ್ದರು.

ಜಮೀನಿನಲ್ಲಿದ್ದ ಉತ್ತಮ ಬೆಳೆ ಈ ಮಳೆಯಿಂದ ನೆಲಕಚ್ಚಿದ್ದು, ಅನೇಕ ಕಡೆಗಳಲ್ಲಿ ಮನೆಗಳಿಗೆ ನೀರು ನುಗ್ಗಿ ಮನೆಯಲ್ಲಿದ್ದ ಬಟ್ಟೆ, ಧವಸಧಾನ್ಯ, ದಾಖಲಾತಿಗಳು ಎಲ್ಲವೂ ನೀರಿನಲ್ಲಿ ಕೊಚ್ಚಿಹೋಗಿವೆ. ಮಂಗಳವಾರ ರಾತ್ರಿ ಊಟ ಮಾಡಿ ಮಲಗಿದ ಜನರ ನಿದ್ದೆಗೆ ಜಾರುವ ಸಂದರ್ಭದಲ್ಲಿ ದಿಢೀರನೆ ಬಂದ ಮಳೆ ಜನರ ಬದುಕನ್ನು ಅಲ್ಲೋಲಕಲ್ಲೋಲಗೊಳಿಸಿದೆ.

ವಿಶೇಷವಾಗಿ ನನ್ನಿವಾಳ ಗ್ರಾಮ ಪಂಚಾಯಿತಿ ವ್ಯಾಪ್ತಿಯಲ್ಲಿ ಹೆಚ್ಚು ಮಳೆಯಾಗಿ ಆ ಭಾಗದ ಬಹುತೇಕ ಜಮೀನುಗಳು ಮಳೆ ನೀರಿನಿಂದ ಆವೃತ್ತವಾಗಿ ಬೆಳೆ ಸಂಪೂರ್ಣ ನೀರಿನಲ್ಲಿ ಮುಳುಗಿದೆ. ನನ್ನಿವಾಳ ಗ್ರಾಮದ ಪ್ರದೀಪ್ ಎಂಬುವವರಿಗೆ ಸೇರಿದ ಶೇಂಗಾ ಬೆಳೆ ನೀರಿನಿಂದ ಆವೃತ್ತವಾಗಿದೆ. ದೊಡ್ಡ ಮಲ್ಲಯ್ಯ ಎಂಬುವವರ ಸೇರಿದಂತೆ 1.20 ಎರೆಕ ಜಮೀನಿನಲ್ಲಿದ್ದ ಈರುಳ್ಳಿ ನೀರಿನಲ್ಲಿ ಕೊಚ್ಚಿ ಹೋಗಿದೆ. ಓಬಯ್ಯನಹಟ್ಟಿಯ ಶೇಖರಪ್ಪ ಎಂಬುವವರ ಶೇಂಗಾ ಬೆಳೆ ನೀರಿನಿಂದ ಆವೃತ್ತವಾಗಿದೆ. ಗೌಸಮುದ್ರ ಗ್ರಾಮದ ಶೇಖರಪ್ಪ ಎಂಬುವವರ ಜಮೀನಲ್ಲಿದ್ದ ಶೇಂಗಾ ಸಂಪೂರ್ಣ ನೀರಿನಿಂದ ಮುಳುಗಿ 40 ಸಾವಿರ ನಷ್ಟ ಸಂಭವಿಸಿದೆ. ಮಲ್ಲಸಮುದ್ರ ಗ್ರಾಮ ಗಂಗಾಧರ ಎಂಬುವವರ 5 ಎಕರೆಯಲ್ಲಿದ್ದ ಮೆಕ್ಕೆಜೋಳ ನೀರಿನಿಂದ ಆವೃತ್ತವಾಗಿದೆ. ಸ್ಥಳಕ್ಕೆ ಕೃಷಿ ಇಲಾಖೆ ಸಹಾಯಕ ನಿರ್ದೇಶಕ ಜೆ.ಅಶೋಕ್, ಕಂದಾಯ ಇಲಾಖೆ ಅಧಿಕಾರಿಗಳು ಭೇಟಿ ನೀಡಿ ಪರಿಶೀಲನೆ ನಡೆಸಿದರು.

ಪೆತ್ತಮರಹಟ್ಟಿ ಪಾಪಮ್ಮ ಎಂಬುವವರಿಗೆ ಸೇರಿದ ಮನೆ ಬಿದ್ದು ಸುಮಾರು 30 ಸಾವಿರ ನಷ್ಟ ಸಂಭವಿಸಿದೆ. ಚಿತ್ರನಾಯಕಹಳ್ಳಿ, ಮೈಲನಹಳ್ಳಿ ರಸ್ತೆ ಸಂಪೂರ್ಣವಾಗಿ ನೀರಿನಲ್ಲಿ ಮುಳುಗಿ ಜನರು ಓಡಾಟಕ್ಕೆ ತೊಂದರೆ ಉಂಟಾಯಿತು. ಗೌಡಗೆರೆ ಗ್ರಾಮದ ರುದ್ರಪ್ಪ ಎಂಬುವವರ ವಾಸದ ಮನೆ ಬಿದ್ದು, 50 ಸಾವಿರ ನಷ್ಟ ಸಂಭವಿಸಿದೆ.











## ರಹೀಂನಗರಕ್ಕೆ ನುಗ್ಗಿದ ಮಳೆ ನೀರು: ಜಿಲ್ಲಾಧಿಕಾರಿ ಭೇಟಿ ಪರಿಶೀಲನೆ

» **ಚಳ್ಳಕೆರೆ**

ಮಂಗಳವಾರ ರಾತ್ರಿ ಸುರಿದ ಮಳೆ ಆರ್ಭಟಕ್ಕೆ ನಗರದ ಕೆಲ ಪ್ರದೇಶಗಳು ಜನಾವೃತ್ತವಾಗಿ, ರಹೀಂನಗರದ ಮನೆಗಳಿಗೆ ನೀರು ನುಗ್ಗಿ ಅವಾಂತರ ಸೃಷ್ಠಿಸಿದೆ.

ರಹೀಂನಗರ ವ್ಯಾಪ್ತಿಯ ಹಳ್ಳಪಕ್ಕದ ಮನೆಗಳಿಗೆ ಮಂಗಳವಾರ ರಾತ್ರಿ ಮಳೆಯ ನೀರು ಏಕಾಏಕಿ ನುಗ್ಗಿದ ಪರಿಣಾಮ ಮನೆಗಳು ಸಂಪೂರ್ಣ ನೀರಿನಿಂದ ಆವೃತ್ತವಾಗಿ ದವಸದಾನ್ಯ, ಬಟ್ಟೆ, ಕೆಲ ದಾಖಲೆಗಲು ನೀರಿನಲ್ಲಿ ಕೊಚ್ಚಿಹೋಗಿವೆ. ಮನೆಗೆ ನುಗ್ಗಿದ್ದ ನೀರನ್ನು ಹೊರ ಹಾಕಲು ನಿವಾಸಿಗಳು ಹರಸಾಹಸ ಪಟ್ಟರು. ಇಡೀ ರಾತ್ರಿ ಮಕ್ಕಳು, ಮಹಿಳೆಯರು, ವೃದ್ದರು ಮಳೆಯ ನೀರಿನಲ್ಲೇ ಜಾಗರಣೆ ಮಾಡುವಂತಾಯಿತು. ಏಕಾಏಕಿ



ನೀರು ಒಳಬಂದ ಹಿನ್ನೆಲೆಯಲ್ಲಿ ಎಲ್ಲಿಹೋಗಬೇಕು, ಏನು ಮಾಡಬೇಕು ಎಂದು ತಿಳಿಯದ ಜನರು ರಸ್ತೆ ಬಂದು ನಿಂತಿದ್ದರು. ಕಾಟಪ್ಪನಹಟ್ಟಿ, ಚಿತ್ರಯ್ಯನಹಟ್ಟಿ, ಸೂಜಿಮಲ್ಲೇಶ್ವರ ನಗರ, ಹಳೇಟೌನ್ ಸೇರಿದಂತೆ ಹಲವಾರು ಕಡೆಯ ಪ್ರದೇಶ ಸಂಪರ್ಕ ರಸ್ತೆಯ ಮೇಲೆ ನೀರು ಹರಿದ ಪರಿಣಾಮ ರಸ್ತೆಗಳು ಬಂದ್ ಆಗಿದ್ದವು. ರಾಜಕಾಲುವೆಯ ಪಕ್ಕದ ಮನೆಗಳಿಗೆ ನೀರು ನುಗ್ಗಿ ಮನೆಯಲ್ಲಿದ್ದ ವಸ್ತುಗಳು ನೀರಿಗೆ ಆಹುತಿಯಾಗಿವೆ. ಜನರು ಇಡೀ ರಾತ್ರಿ ಮನೆಗೆ ನುಗ್ಗಿದ ನೀರನ್ನು ಹೊರಹಾಕುವುದಕ್ಕೆ ಪ್ರಯಾಸ ಪಟ್ಟರು. ನಗರ, ಹಳ್ಳಿ ಭಾಗದಿಂದ ಜನರಿಗೆ ಜಲದಿಗ್ಭಂಧನ ಉಂಟಾಗಿತ್ತು.


ಪುಟ 2


## ಫಾಸ್ಟ್ ನ್ಯೂಸ್

### ವೃದ್ದೆಯೊಬ್ಬರು ಕೆಲ್ಲೋಡು ನದಿಗೆ ಹಾರಿ ಆತ್ಮಹತ್ಯೆಗೆ ಯತ್ನ

» **ಹೊಸದುರ್ಗ**

ಜೀವನದಲ್ಲಿ ಜಿಗುಪ್ಸೆಗೊಂಡು ವೇದಾತಿ ನದಿಗೆ ಹಾರಿದ್ದ ವೃದ್ದೆಯನ್ನ ಕಾರಿನಲ್ಲಿ ಹೋಗುವಾಗ ನೋಡಿದ ಯುವಕರಿಬ್ಬರು ನದಿಗೆ ಹಾರಿ ರಕ್ಷಿಸಿದ ಘಟನೆ ತಾಲೂಕಿನ ಕೆಲ್ಲೋಡು ಗ್ರಾಮದ ಸಮೀಪ ಶ್ರೀರಾಂಪುರ ಪೋಲೀಸ್ ಠಾಣಾ ವ್ಯಾಪ್ತಿಯಲ್ಲಿ ಬುಧವಾರ ನಡೆದಿದೆ.ಆತ್ಮಹತ್ಯೆಗೆ ಯತ್ನಿಸಿದ ವೃದ್ದೆಯನ್ನ ಹೊಸದುರ್ಗ ತಾಲೂಕು ರಂಗವ್ವನಹಳ್ಳಿ ಲಂಬಾಣಿಹಟ್ಟಿ ಗ್ರಾಮದ ಶಾಂತಾಬಾಯಿ (70) ಎಂದು ತಿಳಿದು ಬಂದಿದ್ದು ಶಾಂತಾಬಾಯಿ ಬುಧವಾರ ಮದ್ಯಾಹ್ನ ತಾಲೂಕಿನ ಕೆಲ್ಲೋಡು ಸಮೀಪವಿರುವ ತುಂಬಿ ಹರಿಯುತ್ತಿದ್ದ ವೇದಾವತಿಗೆ ನದಿಯ ಸೇತುವೆಯ ಮೇಲಿಂದ ಹಾರಿದ್ದಾಳೆ ಇದೇ ಸಂಧರ್ಬದಲ್ಲಿ ಅದೇ ದಾರಿಯಲ್ಲಿ ಕಾರಿನಲ್ಲಿ ಪ್ರಯಾಣಿಸುತ್ತಿದ್ದ ತೇಜು ಮತ್ತು ತರುಣ್ ಎಂಬುವವರು ಈ ದೃಶ್ಯವನ್ನ ನೋಡಿ ಕಾರಿನಿಂದ ಇಳಿದು ನದಿಗೆ ಜಿಗಿದು ಮೇಲೆತ್ತಿಕೊಂಡು ಬಂದು ಪ್ರಾಣಾಪಾಯದಿಂದ ಕಾಪಾಡಿದ್ದಾರೆ ಕೂಡಲೆ ಅಲಿಯೇ ಇದ್ದ ಕೆಲ್ಲೋಡು ಗ್ರಾಮ ಪಂಚಾಯಿತಿ ಮಾಜಿ ಸದಸ್ಯ ಎನ್.ಮಂಜಪ್ಪ ದೂರವಾಣಿಯ ಮೂಲಕ ಸಂಪರ್ಕಿಸಿ ತುರ್ತುವಾಹನವನ್ನ ಕರೆಸಿಕೊಂಡು ಅಸ್ವಸ್ಥ ಗೊಂಡಿದ್ದ ವೃದ್ದೆಯ ಚಿಕಿತ್ಸೆಗಾಗಿ ಹೊಸದುರ್ಗ ಆಸ್ಪತ್ರೆಗೆ ರವಾನಿಸಿದ್ದಾರೆ.ಪರೀಕ್ಷಿಸಿದ ವೈದ್ಯರು ನಂತರ ಹೆಚ್ಚಿನ ಚಿಕಿತ್ಸೆಗೆ ಚಿತ್ರದುರ್ಗ ಜಿಲ್ಲಾಸ್ಪತ್ರೆಗೆ ರವಾನಿಸಿದ್ದಾರೆ ಎಂದು ತಿಳಿದು ಬಂದಿದ್ದು ವೃದ್ದೆಯನ್ನು ಆಸ್ಪತ್ರೆಗೆ ಸೇರಿ ಚಿಕಿತ್ಸೆ ಕೊಡಿಸುವಲ್ಲಿ ಸ್ಥಳಿಯರಾದ ಕೆಲ್ಲೋಡು ಗ್ರಾಮದ ಹನುಮಂತಪ್ಪ, ರಂಗನಾಥ್ ಹಾಗೂ ಎನ್. ಮಂಜಪ್ಪ ಸಹಕಾರಿಯಾಗಿದ್ದಾರೆ

### ಶೈಕ್ಷಣಿಕ ಶುಲ್ಕ ಮರುಪಾವತಿಗೆ ಅರ್ಜಿ

» **ಚಿತ್ರದುರ್ಗ**

ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ ವತಿಯಿಂದ 2024–25ನೇ ಸಾಲಿನ ಶೈಕ್ಷಣಿಕ ಶುಲ್ಕ ಮರುಪಾವತಿಗೆ ಅರ್ಹ ಕ್ರೀಡಾಪಟುಗಳಿಂದ ಅರ್ಜಿ ಆಹ್ವಾನಿಸಲಾಗಿದೆ. ಭಾರತ ಸರ್ಕಾರದಿಂದ ಮಾನ್ಯತೆ ಪಡೆದ ಅಧಿಕೃತ ರಾಷ್ಟ್ರೀಯ ಕ್ರೀಡಾ ಸಂಸ್ಥೆಗಳು ಆಯೋಜಿಸುವ ರಾಷ್ಟ್ರಮಟ್ಟದ ಕ್ರೀಡಾಕೂಟಗಳಲ್ಲಿ ಭಾಗವಹಿಸಿ ಪದಕ ಪಡೆದ ಮತ್ತು ಅಂತರಾಷ್ಟ್ರೀಯ ಮಟ್ಟದ ಕ್ರೀಡಾಕೂಟಗಳಿಗೆ ನಿಯೋಜಿಸಲ್ಪಟ್ಟ ತಂಡದಲ್ಲಿ ಭಾಗವಹಿಸಿ ಉತ್ತಮ ಸಾಧನೆ ಮಾಡಿದ ರಾಜ್ಯದ ಕ್ರೀಡಾಪಟುಗಳು ಶೈಕ್ಷಣಿಕ ಶುಲ್ಕ ಮರುಪಾವತಿಗೆ ಅರ್ಜಿ ಸಲ್ಲಿಸಬಹುದು. ಕಚೇರಿಯಿಂದ ಅರ್ಜಿಯನ್ನು ಪಡೆದು ಭರ್ತಿಮಾಡಿ ಅಗತ್ಯ ದಾಖಲೆಗಳೊಂದಿಗೆ ಸೆಪ್ಟೆಂಬರ್ 25ರೊಳಗೆ ಸಲ್ಲಿಸುವಂತೆ ಸಹಾಯಕ ನಿರ್ದೇಶಕಿ ಎಸ್.ಎಂ.ನೆಲವಿಗಿ ತಿಳಿಸಿದ್ದಾರೆ.

### ಏಕಲವ್ಯ ಹಾಗೂ ಕ್ರೀಡಾ ಪೋಷಕ ಪ್ರಶಸ್ತಿಗೆ ಅರ್ಜಿ

» **ಚಿತ್ರದುರ್ಗ**

ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ ವತಿಯಿಂದ ಏಕಲವ್ಯ ಹಾಗೂ ಕ್ರೀಡಾ ಪೋಷಕ ಪ್ರಶಸ್ತಿಗೆ ಅರ್ಜಿ ಆಹ್ವಾನಿಸಲಾಗಿದೆ. ಕ್ರೀಡಾ ಕ್ಷೇತ್ರದಲ್ಲಿ ಅಸಾಧಾರಣ ಪ್ರತಿಭೆಯನ್ನು ತೋರಿರುವ ರಾಜ್ಯದ ಕ್ರೀಡಾಪಟುಗಳು ಏಕಲವ್ಯ ಪ್ರಶಸ್ತಿಗೆ ಅರ್ಜಿ ಸಲ್ಲಿಸಬಹುದು. ಕ್ರೀಡಾ ಕ್ಷೇತ್ರದಲ್ಲಿ ತೊಡಗಿಸಿಕೊಂಡು ಕ್ರೀಡೆಯ ಅಭಿವೃದ್ಧಿಗೆ ನೆರವು ನೀಡಿ ರಾಜ್ಯ, ರಾಷ್ಟ್ರೀಯ ಮತ್ತು ಅಂತರಾಷ್ಟ್ರೀಯ ಕ್ರೀಡಾ ಕ್ಷೇತ್ರದಲ್ಲಿ ಕೊಡುಗೆ ನೀಡಿದವರು ಕ್ರೀಡಾ ಪೋಷಕ ಪ್ರಶಸ್ತಿಗೆ ಅರ್ಜಿ ಸಲ್ಲಿಸಬಹುದು. ಏಕಲವ್ಯ ಪ್ರಶಸ್ತಿಗೆ ಆಗಸ್ಟ್ 25 ಹಾಗೂ ಕ್ರೀಡಾ ಪೋಷಕ ಪ್ರಶಸ್ತಿಗೆ ಸೆಪ್ಟೆಂಬರ್ 10 ಕಡೆಯ ದಿನವಾಗಿದೆ. ಹೆಚ್ಚಿನ ಮಾಹಿತಿಗಾಗಿ 08194–235635 ಸಂಪರ್ಕಿಸಬಹುದು.

## ಪ್ರಮುಖ ಸುದ್ದಿ

### ಮೂರು ಬಾರಿ ಸ್ವಚ್ಚ ನಗರ ರಾಷ್ಟ್ರೀಯ ಪ್ರಶಸ್ತಿ ಪಡೆದ ಪುರಸಭೆ

# ಹೊಸದುರ್ಗ ಪುರಸಭಾ ಅಧ್ಯಕ್ಷ ಸ್ಥಾನ ಯಾರ ಪಾಲು?

» **ವರದಿ: ಮಾನಸ ಬಸವರಾಜ್ ತುಂಬಿನಕೆರೆ**

ಹೊಸದುರ್ಗ: ರಾಜಕೀಯ ಕ್ಷೇತ್ರದಲ್ಲಿ ಹೊಸದುರ್ಗವೆಂಬುದು ರಾಜ್ಯದಲ್ಲಿಯೇ ವಿಶೇಷ ಸ್ಥಾನವನ್ನು ಹೊಂದಿದೆ. ಒಮ್ಮೆ ರಾಜಕೀಯ ಪಕ್ಷಗಳು ಮತ್ತು ಪಕ್ಷೇತರರ ನಡುವೆ ನಿರಂತರ ಜಿದ್ದಾಜಿದ್ದಿ ನಡೆಯುತ್ತಲೇ ಬಂದಿದೆ. ಕಳೆದ ಪುರಸಭಾ ಚುನಾವಣೆ ಸಮಯದಲ್ಲಿ ಬಿಜೆಪಿಯಲ್ಲಿ ಶಾಸಕ ಗೋಳಿಹಟ್ಟಿ ಶೇಖರ್ ಅವರು ಶಾಸಕರಾಗಿದ್ದರು. 23 ಸದಸ್ಯ ಬಲವನ್ನ ಒಳಗೊಂಡ ಹೊಸದುರ್ಗ ಪುರಸಭಾ ಬಿಜೆಪಿ ಸದಸ್ಯರ ಸಂಖ್ಯೆ 14, ಕಾಂಗ್ರೆಸ್ ಸದಸ್ಯರ ಸಂಖ್ಯೆ 04, ಪಕ್ಷೇತರರ 05 ಸ್ಥಾನಗಳು.

ಪರಿಶಿಷ್ಟ (ST) ಪಂಗಡಕ್ಕೆ ಮೀಸಲಾಗಿರುವ ಅಧ್ಯಕ್ಷ ಸ್ಥಾನಕ್ಕೆ ಕಾಂಗ್ರೆಸ್ ನಿಂದ ಶಂಕ್ರಪ್ಪ ಹಾಗೂ ಬಿಜೆಪಿಯ ರಾಜೇಶ್ವರಿ ಆನಂದ್ ನಡುವೆ ನೇರ ಹಣಾಹಣಿ




ಏರ್ಪಟ್ಟಿತ್ತಾದರೂ ಈಗಾಗಲೇ ಬಿಜೆಪಿಯ ಎಲ್ಲಾ 14 ಸದಸ್ಯರು ಮತ್ತು ಪಕ್ಷೇತರ 05 ಸದಸ್ಯರು ಒಟ್ಟಿಗೆ ಪ್ರವಾಸದಲ್ಲಿರುವ ಮಾಹಿತಿ ಲಭ್ಯವಾಗಿದೆ. ಉಪಾಧ್ಯಕ್ಷ ಸ್ಥಾನ ಬಿ ಸಿ ಎಂ 'ಎ 'ಮಹಿಳೆಗೆ ಮೀಸಲಿದ್ದು ಬಿಜೆಪಿಯ ಗೀತಾ ಆಸಂದಿ ಕಣದಲ್ಲಿ ಉಳಿಯಬಹುದು ಎಂಬ ಲೆಕ್ಕಾಚಾರವಿದೆ. ಆದರೂ ಅಧಿಕಾರದಲ್ಲಿರುವ ಕಾಂಗ್ರೆಸ್ ಶಾಸಕ ಬಿ ಜಿ ಗೋವಿಂದಪ್ಪನವರ ಚದುರಂಗದಾಟದಲ್ಲಿ ಅತೃಪ್ತ ಕೆಲವು ಬಿಜೆಪಿ ಪಕ್ಷೇತರರು ಹಾಗೂ ಕಾಂಗ್ರೆಸ್ ಸದಸ್ಯರು ಒಟ್ಟಿಗೆ ಸೇರಿ ಕಾಂಗ್ರೆಸ್ ಅಧಿಕಾರ ಹಿಡಿದರೆ ಅಚ್ಚರಿಪಡಬೇಕಾಗಿಲ್ಲ.

ಈಗಾಗಲೇ ಬಿಜೆಪಿಯ ಜಿಲ್ಲಾಧ್ಯಕ್ಷ ಮುರುಳಿ ಮತ್ತು ಜಿಲ್ಲಾ ಪ್ರಧಾನ ಕಾರ್ಯದರ್ಶಿ ಸಂಪತ್ ರವರು ಎಲ್ಲಾ ಬಿಜೆಪಿ ಸದಸ್ಯರಿಗೆ ವಿಪ್ ಜಾರಿ ಮಾಡಿ ಪಕ್ಷದ ಅಭ್ಯರ್ಥಿಗೆ ಮತ ಹಾಕಲು ತಿಳಿಸಿರುತ್ತಾರೆ. ಇದಕ್ಕೆಲ್ಲಾ ಇಂದಿನ ಚುನಾವಣೆಯಲ್ಲಿ ಉತ್ತರ ಸಿಗಲಿದೆ. ಏನಾದರೂ ಆಗಲಿ ಕಳೆದ ಒಂದುವರೆ ವರ್ಷದಿಂದ ಅಧ್ಯಕ್ಷ ಸ್ಥಾನ ಖಾಲಿ ಇದ್ದು ಬೇಗನೆ ಚುನಾವಣೆ ನಡೆದು ನಗರವನ್ನ ಅಭಿವೃದ್ಧಿ ಮಾಡುವ ಅಧ್ಯಕ್ಷರಾಗಲಿ ಎಂಬುದೇ ನಮ್ಮ ಆಸೆ ಎನ್ನುತ್ತಾರೆ ಹೊಸದುರ್ಗ ನಗರದ ನಾಗರಿಕರು.

> ನಾನು ಪಕ್ಷದ ನಿಷ್ಠಾವಂತ ಕಾರ್ಯಕರ್ತ, ಭಾರತ ದೇಶ ಜಗತ್ತಿನ ಶಕ್ತಿಶಾಲಿ ರಾಷ್ಟ್ರವಾಗಲು ಬಿಜೆಪಿಯ ಅಂದಿನ ಪ್ರಧಾನಿ ಅಟಲ್ ಬಿಹಾರಿ ವಾಜಪೇಯಿ ಅವರನ್ನ ಮತ್ತು. ಬಿಜೆಪಿಯ ತತ್ವ ಸಿದ್ಧಾಂತಗಳನ್ನಒಪ್ಪಿ ಕೆಲಸ ಮಾಡುತ್ತಿದ್ದೇನೆ ಜನರು ಬಿಜೆಪಿಯನ್ನು ನಂಬಿ ನನಗೆ ಮತ ಹಾಕಿದ್ದಾರೆ. ವಾರ್ಡಿನ ಮತದಾರರ ಮನಸ್ಸಿಗೆ ನೋವಾಗದಂತೆ ಪಕ್ಷ ಹೇಳಿದ ನಮ್ಮ ಅಭ್ಯರ್ಥಿಗೆ ಮತ ಬಿಜೆಪಿ ಸದಸ್ಯನಾದ ನನ್ನ ಕರ್ತವ್ಯ.ನಮ್ಮ ಗುರಿ ಬಿಜೆಪಿಯ ತೆಕ್ಕೆಗೆ ಹೊಸದುರ್ಗ ಪುರಸಭೆಯನ್ನು ಅಧಿಕಾರಕ್ಕೆ ತರುವುದು.
>
> » **ದಾಳಿಂಬೆ ಗಿರೀಶ್, ಪುರಸಭಾ ಸದಸ್ಯ**

## ಫಾಸ್ಟ್ ನ್ಯೂಸ್

### ರಹೀಂನಗರಕ್ಕೆ ನುಗ್ಗಿದ ಮಳೆ ನೀರು: ಜಿಲ್ಲಾಧಿಕಾರಿ ಭೇಟಿ ಪರಿಶೀಲನೆ







» ಮೊದಲ ಪುಟದಿಂದ

ಪಾವಗಡ ರಸ್ತೆಯ ಶಾಲಾ, ಕಾಲೇಜು, ಮನೆಗಳಿಗೆ ಓಡಾಟ ನಡೆಸಲು ಜಲಾಸುರ ದಿಗ್ಬಂಧನ ಹಾಕಿದ್ದ ಜನರು ನಗರದೊಳಗೆ ಬರಲು ಪರದಾಟ ಬಡೆಸಿದರು. ಅಂಬೇಡ್ಕರ್, ಗಾಂಧಿನಗರ, ಜನತಾಕಾಲೋನಿ ಕೆಲಭಾಗಗಳ ಮನೆಗಳಿಗೆ ನೀರು ನುಗ್ಗಿವೆ. ರಸ್ತೆಗಳ ಸಂಗ್ರಹವಾಗಿದ್ದ ನೀರನ್ನು ನಗರಸಭೆ ಅಧಿಕಾರಿಗಳು ಜೆಸಿಬಿ ಮೂಲಕ ತೆರವು ಮಾಡಿದರು. ನಾಯಕನಹಟ್ಟಿ ಪೊಲೀಸ್ ಠಾಣೆಗೆ ನೀರು ನುಗ್ಗಿ ಅವಾಂತರ ಸೃಷ್ಟಿಸಿತು. ರಾಜಕಾಲುವೆಯಲ್ಲಿ ಸ್ವಚ್ಚತೆ ಇಲ್ಲದೆ ಗಿಡಗಂಟೆ ಬೆಳೆದು ಮಳೆಯ ನೀರು ರಹೀಂನಗರದ ಮನೆಗಳಿಗೆ ನುಗ್ಗಿವೆ ಎಂದು ಸ್ಥಳೀಯರು ಆರೋಪಿಸಿದರು.

ಜಿಲ್ಲಾಧಿಕಾರಿ ಟಿ.ವೆಂಕಟೇಶ್, ತಹಶೀಲ್ದಾರ್ ರೇಹಾನ್‌ಪಾಷ, ಪೌರಾಯುಕ್ತ ಜಗರೆಡ್ಡಿ, ಠಾಣಾ ಇನ್ಸ್‌ಪೆಕ್ಟರ್ ರಾಜಫಕೃದ್ದೀನ್‌ದೇಸಾಯಿ, ಇಂಜಿನಿಯರ್ ಕೆ.ವಿನಯ್, ಲೋಕೇಶ್, ಕಂದಾಯಾಧಿಕಾರಿ ತಿಪ್ಪೇಸ್ವಾಮಿ, ಗ್ರಾಮಲೆಕ್ಕಾಧಿಕಾರಿ ಎಂ.ಪ್ರಕಾಶ್ ಬೇಟಿ ನೀಡಿ ಪರಿಶೀಲನೆ ನಡೆಸಿದರು. ತಳಕು–94.02, ನಾಯಕನಹಟ್ಟಿ–69.02, ಚಳ್ಳಕೆರೆ–67.04, ದೇವರಮರಿಕುಂಟೆ–39.02, ಪರಶುರಾಮಪುರ–7.02 ಒಟ್ಟು 256.12 ಎಂ.ಎಂ ಮಳೆಯಾಗಿದೆ.

### ರೈತರ ಹಿತವೇ ನನಗೆ ಮುಖ್ಯ: ಶಾಸಕರಾದ ಬಸವರಾಜು ಶಿವಗಂಗಾ



» ಚನ್ನಗಿರಿ

ರೈತರು ಬದುಕು ಚೆನ್ನಾಗಿದ್ದರೆ ದೇಶವೇ ನೆಮ್ಮದಿಯಿಂದ ಇರುತ್ತದೆ, ಅನ್ನದಾತರ ಹಿತವೇ ನನಗೆ ಮುಖ್ಯ ಎಂದು ಶಾಸಕರಾದ ಬಸವರಾಜು ವಿ ಶಿವಗಂಗಾ ತಿಳಿಸಿದರು. ತಾಲ್ಲೂಕಿನ ಉಬ್ರಾಣಿ – ಅಮೃತಾಪುರ ಏತ ನೀರಾವರಿ ಯೋಜನೆ ಪಂಪ್ ಹೌಸ್ ಕಂ ಜಾಕ್ ವೆಲ್ ವೀಕ್ಷಿಸಿ ಈ ವಿಷಯ ತಿಳಿಸಿದರು. ಕೆರೆಗಳಿಗೆ ನೀರು ತುಂಬಿಸುವ ಕಾರ್ಯದಲ್ಲಿ ತಾಂತ್ರಿಕ ತೊಂದರೆಯಾಗದಂತೆ ಎಚ್ಚರಿಕೆವಹಿಸುವಂತೆಅಧಿಕಾರಿಗಳಿಗೆಸೂಚಿಸಿದರು. ರಾಜ್ಯದಲ್ಲಿ ಉತ್ತಮ ಮಳೆಯಾಗುತ್ತಿರುವ ಹಿನ್ನೆಲೆ ಭದ್ರಾ ನದಿ ಭರ್ತಿಯಾಗಿದ್ದು, ಉಬ್ರಾಣಿ – ಅಮೃತಾಪುರ ಏತ ನೀರಾವರಿ ಯೋಜನೆಗೆ ನೀರು ಹರಿಸಲಾಗುತ್ತಿದೆ, ಇದರಿಂದ ಈ ಭಾಗದ ರೈತರಿಗೆ ಅನುಕೂಲವಾಗಲಿದೆ ಎಂದರು. ಕೆರೆಗಳು ಭರ್ತಿತಿಯಾದರೆ ಅಂತರ ಜಲಮಟ್ಟ ಹೆಚ್ಚಾಗಲಿದೆ, ಇದರಿಂದ ಈ ಭಾಗದ ಅಡಿಕೆ ಬೆಳೆಗಾರರಿಗೆ ಬೇಸಿಗೆಯಲ್ಲಿ ನೀರಿನ ಅಭಾವ ತಪ್ಪಲಿದೆ ಎಂದರು, ತಾಲ್ಲೂಕಿನ ಎಲ್ಲಾ ಕೆರೆಗಳನ್ನು ತುಂಬಿಸುವ ಕನಸಿದೆ ಹಂತಹಂತವಾಗಿಕೆರೆಗಳನ್ನುತುಂಬಿಸಲುಯೋಜನೆ ರೂಪಿಸಿ ಸರ್ಕಾರದ ಗಮನ ಸೆಳೆಯುವೆ ಎಂದರು. ಸಿರಿಗೆರೆ ಗುರುಗಳ ಇಚ್ಚಾ ಶಕ್ತಿಯಿಂದ ಚಿತ್ರದುರ್ಗ ದಾವಣಗೆರೆ ಜಿಲ್ಲೆಯಲ್ಲಿ ಇಂದು ಹತ್ತಾರು ಕೆರೆಗಳಿಗೆ ನೀರು ಹರಿಸಿ ಭರ್ತಿ ಮಾಡಲಾಗಿದೆ, ಇದರಿಂದ ಸಾವಿರಾರು ರೈತರಿಗೆ ಅನುಕೂಲವಾಗಿರುವುದನ್ನ ನಾವು ಸ್ಮರಿಸಲೇ ಬೇಕೆಂದರು. ಈ ಸಂದರ್ಭದಲ್ಲಿ ರವಿ ಗೌಡ್ರು, ವಿಜೇ ಗೌಡ್ರು, ಅರುಣ್ ಗೌಡ್ರು, ಮರವಂಜಿ ತಿಪ್ಪಣ್ಣ ಗೌಡ್ರು, ದೀಪಣ್ಣ, ಯುವ ಮುಖಂಡ ಗಿರೀಶ್, ತಾವರೆಕೆರೆ ಭಾಗದ ರೈತ ಮುಖಂಡರು ಹಾಗೂ ಏತ ನೀರಾವರಿ ಯೋಜನೆ ಅಧಿಕಾರಿಗಳು ಉಪಸ್ಥಿತರಿದ್ದರು.

# ಗೆಜೆಟೆಡ್ ಪ್ರೊಬೆಷನರ್ಸ್ ಸ್ಪರ್ಧಾತ್ಮಕ ಪರೀಕ್ಷೆ

## ಅಕ್ರಮಗಳ ತಡೆಗೆ ಎಚ್ಚರಿಕೆಯಿಂದ ಪರೀಕ್ಷಾ ಕಾರ್ಯ ನಿರ್ವಹಿಸಿ ಪರೀಕ್ಷಾ ಕೇಂದ್ರಗಳ ಮುಖ್ಯಸ್ಥರಿಗೆ ಡಿಸಿ ಟಿ.ವೆಂಕಟೇಶ್ ತಾಕೀತು

» ಚಿತ್ರದುರ್ಗ

ಸ್ಪರ್ಧಾತ್ಮಕ ಪರೀಕ್ಷೆ ನಿರ್ವಹಣೆ ಕಾರ್ಯ ಅತಿ ಸೂಕ್ಷ್ಮವಾದದ್ದು, ಸಾವಿರಾರು ಅಭ್ಯರ್ಥಿಗಳ ಭವಿಷ್ಯ ಇದರಲ್ಲಿ ಅಡಗಿದೆ. ಪರೀಕ್ಷಾ ಕೇಂದ್ರಗಳ ಮುಖ್ಯಸ್ಥರು ಅಕ್ರಮಗಳಿಗೆ ಅವಕಾಶ ಮಾಡಿಕೊಡದಂತೆ ಎಚ್ಚರಿಕೆಯಿಂದ, ಪ್ರಾಮಾಣಿಕವಾಗಿ ಪರೀಕ್ಷಾ ಕಾರ್ಯ ನಿರ್ವಹಿಸಬೇಕು ಎಂದು ಜಿಲ್ಲಾಧಿಕಾರಿ ಟಿ.ವೆಂಕಟೇಶ್ ತಾಕೀತು ಮಾಡಿದರು.

ಆಗಸ್ಟ್ 27 ರಂದು ಕೆ.ಪಿ.ಎಸ್.ಸಿ ವತಿಯಿಂದ ನಡೆಯಲಿರುವ ಗೆಜೆಟೆಡ್ ಪ್ರೊಬೆಷನರ್ಸ್ ಸ್ಪರ್ಧಾತ್ಮಕ ಪರೀಕ್ಷೆ ಕುರಿತು, ನಗರದ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಜರುಗಿದ ಪೂರ್ವ ಸಿದ್ಧತಾ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಜಿಲ್ಲೆಯಲ್ಲಿ ಅನೇಕ ಸ್ಪರ್ಧಾತ್ಮಕ ಪರೀಕ್ಷೆಗಳನ್ನು ಉತ್ತಮವಾಗಿ ನಡೆಸಲಾಗಿದೆ. ಈ ಬಾರಿಯೂ ಯಾವುದೇ ಲೋಪದೋಷಗಳು ಬಾರದಂತೆ ಪರೀಕ್ಷೆ ಕಾರ್ಯ ನಿರ್ವಹಿಸಬೇಕು. ಪ್ರಾಮಾಣಿಕ ಅಭ್ಯರ್ಥಿಗಳಿಗೆ ಅನ್ಯಾಯವಾಗಬಾರದು. ಪರೀಕ್ಷಾ ಕೇಂದ್ರಗಳಲ್ಲಿ ಕುಡಿಯುವ ನೀರು, ಶೌಚಾಲಯಸೌಲಭ್ಯಕಲ್ಪಿಸುವುದರಜೊತೆಗೆ ಪರೀಕ್ಷಾಕೊಠಡಿಗಳಲ್ಲಿಅಭ್ಯರ್ಥಿಗಳಿಗೆಸೂಕ್ತ ಆಸನ, ಗಾಳಿ ಬೆಳಕಿನ ವ್ಯವಸ್ಥೆ ಇರಬೇಕು. ಮಳೆಗಾಲವಾದ್ದರಿಂದ ಕೊಠಡಿಗಳಲ್ಲಿ ಮಳೆ ನೀರಿನಿಂದ ತೊಂದರೆಯಾಗದಂತೆ ಎಚ್ಚರಿಕೆ ವಹಿಸಬೇಕು ಎಂದು ಜಿಲ್ಲಾಧಿಕಾರಿ ಟಿ.ವೆಂಕಟೇಶ್ ಹೇಳಿದರು.

ಪರೀಕ್ಷಾ ಕೇಂದ್ರಗಳಿಗೆ ಪ್ರಶ್ನೆ ಪತ್ರಿಕೆ ಹಾಗೂ ಓಎಂಆರ್ ಬಂಡಲ್‌ಗಳನ್ನು ಕೊಂಡೊಯ್ಯಲು ನೇಮಿಸಿರುವ ಮಾರ್ಗಾಧಿಕಾರಿಗಳು ಸರಿಯಾದ ಸಮಯಕ್ಕೆ ಖಜಾನೆಯಿಂದ ಪ್ರಶ್ನೆ ಪತ್ರಿಕೆಗಳನ್ನು ಪಡೆದು ಪರೀಕ್ಷಾ ಕೇಂದ್ರಗಳಿಗೆ ತಲುಪಿಸಬೇಕು. ಪರೀಕ್ಷೆ ಮುಗಿದ ನಂತರ ಪರೀಕ್ಷಾ ಕೇಂದ್ರಗಳ ಮುಖ್ಯಸ್ಥರು ಓಎಂಆರ್ ಬಂಡಲ್‌ಗಳನ್ನು ಅಂಚೆ ಮೂಲಕ ಕರ್ನಾಟಕ ಲೋಕಸೇವಾ ಆಯೋಗಕ್ಕೆ ಕಳುಹಿಸಿಕೊಡಬೇಕು. ಈ ಹಿನ್ನಲೆಯಲ್ಲಿ ಪರೀಕ್ಷಾ ಕೇಂದ್ರಗಳ ಬಳಿ ಇರುವ ಅಂಚೆ ಕಚೇರಿಗಳು ಓಎಂಆರ್ ಬಂಡಲ್‌ಗಳು ತಲುಪುವವರೆಗೂ ತಪ್ಪದೇ ಕಾರ್ಯ ನಿರ್ವಹಿಸಬೇಕು ಎಂದು ಜಿಲ್ಲಾಧಿಕಾರಿ ಟಿ.ವೆಂಕಟೇಶ್ ನಿರ್ದೇಶನ ನೀಡಿದರು.

ಕರ್ನಾಟಕ ಲೋಕಸೇವಾ ಆಯೋಗದಿಂದಲೇ ಈ ಬಾರಿ ಪರೀಕ್ಷಾ ಕೇಂದ್ರಗಳಲ್ಲಿ ಸಿ.ಸಿ ಟಿವಿ ಹಾಗೂ ಮೊಬೈಲ್ ಜಾಮರ್ ಅಳವಡಿಸಲಾಗುವುದು. ಪ್ರತಿ ಕೊಠಡಿಯ ಸಿಸಿ ಟಿವಿ ದೃಶ್ಯಗಳನ್ನು ವೀಕ್ಷಣೆ ಮಾಡಲಾಗುತ್ತದೆ. ಇದರೊಂದಿಗೆ ಕೊಠಡಿ ಮೇಲ್ವಿಚಾರಕರಿಗೂ ಬಾಡಿ ಕ್ಯಾಮರ ಹಾಕಿಕೊಳ್ಳುವುದನ್ನು ಕಡ್ಡಾಯವಾಗಿಸಿದೆ. ಹಲವು ಸ್ಪರ್ಧಾತ್ಮಕ ಪರೀಕ್ಷೆಗಳಲ್ಲಿ ಎಲೆಕ್ಟ್ರಾನಿಕ್ ಗ್ಯಾಜೆಟ್‌ಗಳನ್ನು ಉಪಯೋಗಿಸಿ ಕೆಲ ಅಭ್ಯರ್ಥಿಗಳು ಅಕ್ರಮ ಎಸಗಲು ಪ್ರಯತ್ನಿಸಿರುವ ಬಗ್ಗೆ ವರದಿಗಳಿವೆ, ಹೀಗಾಗಿ ಪರೀಕ್ಷಾ ಕೇಂದ್ರಗಳಿಗೆ ಆಗಮಿಸುವ ಅಭ್ಯರ್ಥಿಗಳನ್ನು ಪೂರ್ಣ ಪ್ರಮಾಣದಲ್ಲಿ ತಪಾಸಣೆಗೆ ಒಳಪಡಿಸಬೇಕು. ಲೋಕಸೇವಾ ಆಯೋಗ ನೀಡಿರುವ ಪರೀಕ್ಷಾ ಕೈಪಿಡಿಯ ಅನುಸಾರ ಪರೀಕ್ಷಾ ಕಾರ್ಯದಲ್ಲಿ ಮಾಡಬೇಕಾದ ಹಾಗೂ ಮಾಡಬಾರದ ಕಾರ್ಯಗಳ ಬಗ್ಗೆ ಕೊಠಡಿ ಮೇಲ್ವಿಚಾರಕರಿಗೆ ಪರೀಕ್ಷಾ ಕೇಂದ್ರದ ಮುಖ್ಯಸ್ಥರು ಮಾಹಿತಿ ನೀಡುವಂತೆ ಜಿಲ್ಲಾಧಿಕಾರಿ ಟಿ.ವೆಂಕಟೇಶ್ ಸೂಚಿಸಿದರು.

ಪರೀಕ್ಷಾ ಪಾವಿತ್ರತೆ ಕಾಪಾಡುವ ದೃಷ್ಠಿಯಿಂದ ಅ. 27 ರಂದು ಪರೀಕ್ಷೆ ನಡೆಯುವ ಕೇಂದ್ರಗಳ ಸುತ್ತಮುತ್ತಲಿನ 200 ಮೀಟರ್ ಪ್ರದೇಶದಲ್ಲಿ ಸೆಕ್ಷನ್ 114 ವಿಧಿಸಿ ನಿಷೇದಾಜ್ಞೆ ಜಾರಿ ಮಾಡಲಾಗುವುದು. ಈ ಕೇಂದ್ರಗಳ ಅಕ್ಕಪಕ್ಕದಲ್ಲಿ ಕಾರ್ಯನಿರ್ವಹಿಸುವ ಜೆರಾಕ್ಸ್, ಕಂಪ್ಯೂಟರ್ ಹಾಗೂ ಇಂಟರ್‌ನೆಟ್ ಸೆಂಟರ್‌ಗಳನ್ನು ಮುಚ್ಚಬೇಕು. ಒಂದು ವೇಳೆ ಯಾವುದಾದರು ಜೆರಾಕ್ಸ್ ಹಾಗೂ ಕಂಪ್ಯೂಟರ್ ಹಾಗೂ ಇಂಟರ್‌ನೆಟ್ ಸೆಂಟರ್ ತೆರೆದಿದ್ದರೆ, ಪರೀಕ್ಷಾ ಕೇಂದ್ರಗಳ ಮುಖ್ಯಸ್ಥರು ಜಿಲ್ಲಾಡಳಿತಕ್ಕೆ ಮಾಹಿತಿ ನೀಡಬೇಕು. ಪರೀಕ್ಷಾ ಕೇಂದ್ರಗಳಲ್ಲಿ ಆರೋಗ್ಯ ಇಲಾಖೆಯಿಂದ ಹೆಲ್ ಸ್ಕ್ರೀನಿಂಗ್ ಕೌಂಟರ್ ಸ್ಥಾಪಿಸಿ ಆರೋಗ್ಯ ಸಹಾಯಕರನ್ನು ನಿಯೋಜಿಸಬೇಕು ಜಿಲ್ಲಾಧಿಕಾರಿ ಟಿ.ವೆಂಕಟೇಶ್ ಹೇಳಿದರು.

ಪರೀಕ್ಷೆಗೆ ಅಕ್ಕಪಕ್ಕದ ಜಿಲ್ಲೆಗಳಿಂದ ಅಭ್ಯರ್ಥಿಗಳು ಆಗಮಿಸುತ್ತಾರೆ. ಅಭ್ಯರ್ಥಿಗಳಿಗೆ ಗೊಂದಲವಾಗದಂತೆ ಪರೀಕ್ಷಾ ಕೇಂದ್ರಗಳಲ್ಲಿ ಸಾಕಷ್ಟು ಪ್ರಮಾಣದಲ್ಲಿ ಮಾಹಿತಿ ಹಾಗೂ ಸೂಚನಾ ಫಲಕಗಳನ್ನು ಅಳವಡಿಸಬೇಕು. ಅಭ್ಯರ್ಥಿಗಳ ನೊಂದಣಿ ಸಂಖ್ಯೆ, ಕೊಠಡಿ ಸಂಖ್ಯೆಗಳ ಬಗ್ಗೆ ನಿಖರ ಮಾಹಿತಿ ಒದಗಿಸಬೇಕು. ಪರೀಕ್ಷೆ ಆರಂಭದಿಂದ ಹಿಡಿದು ಮುಕ್ತಾಯದವರೆಗೆ ಅಭ್ಯರ್ಥಿಗಳಿಗೆ ಸಮಯದ ಮಾಹಿತಿ ನೀಡಲು ಬೆಲ್ ಬಾರಿಸಬೇಕು ಎಂದು ಜಿ.ಪಂ.ಸಿಇಓ ಎಸ್. ಜೆ.ಸೋಮಶೇಖರ್ ಪರೀಕ್ಷಾ ಕೇಂದ್ರಗಳ ಮುಖ್ಯಸ್ಥರಿಗೆ ಸೂಚಿಸಿದರು.

ಅತ್ಯಂತ ಸೂಕ್ಷ್ಮ ಎಲೆಕ್ಟ್ರಾನಿಕ್ ಉಪಕರಣಗಳನ್ನು ಬಳಸಿ ಪರೀಕ್ಷೆಗಳಲ್ಲಿ ಅಕ್ರಮ ಎಸಗುವ ಸಂಭವ ಇರುತ್ತದೆ. ಆದ್ದರಿಂದ ಪರೀಕ್ಷೆಗೆ ಹಾಜರಾಗುವ ಅಭ್ಯರ್ಥಿಗಳನ್ನು ತಪಾಸಣೆ ಸರಿಯಾದ ರೀತಿಯಲ್ಲಿ ನಿರ್ವಹಿಸಬೇಕು. ಪರೀಕ್ಷಾ ಕೇಂದ್ರಗಳಿಗೆ ಸುತ್ತ ಹಾಗೂ ಮಾರ್ಗಾಧಿಕಾರಿಗಳತಂಡಕ್ಕೆಪೊಲೀಸರನ್ನು ನೇಮಿಸಿ ಭದ್ರತೆ ಕಲ್ಪಿಸಲಾಗುವುದು ಎಂದು ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ರಂಜಿತ್ ಕುಮಾರ್ ಬಂಡಾರು ತಿಳಿಸಿದರು.

ರಾಜ್ಯದ ಬೇರೆ ಬೇರೆ ಜಿಲ್ಲೆಗಳಿಂದ ಪರೀಕ್ಷೆ ಬರೆಯಲು ಅಭ್ಯರ್ಥಿಗಳು ಚಿತ್ರದುರ್ಗ ನಗರಕ್ಕೆ ಆಗಮಿಸುತ್ತಾರೆ. ಇವರಿಗೆ ಅನುಕೂಲವಾಗುವಂತೆ ಬಸ್ ಹಾಗೂ ರೈಲ್ವೇ ನಿಲ್ದಾಣಗಳಲ್ಲಿ ಪರೀಕ್ಷಾ ಕೇಂದ್ರಗಳ ಮಾಹಿತಿ ಪ್ರದರ್ಶಿಸುವಂತೆ ಅಪರ ಜಿಲ್ಲಾಧಿಕಾರಿ ಬಿ.ಟಿ.ಕುಮಾರಸ್ವಾಮಿ ಅಧಿಕಾರಿಗಳಿಗೆ ಸೂಚಿಸಿದರು.

ಕ್ಷೇತ್ರ ಶಿಕ್ಷಣಾಧಿಕಾರಿಗಳು, ಪರೀಕ್ಷಾ ಕೇಂದ್ರ ಮುಖ್ಯಸ್ಥರು ಸೇರಿದಂತೆ ವಿವಿಧ ಇಲಾಖೆ ಅಧಿಕಾರಿಗಳು ಸಭೆಯಲ್ಲಿ ಉಪಸ್ಥಿತರಿದ್ದರು.



### 24 ಪರೀಕ್ಷಾ ಕೇಂದ್ರ 8098 ಅಭ್ಯರ್ಥಿಗಳು

ಪರೀಕ್ಷೆಯು ಆ. 27 ರಂದು ಬೆ. 10 ರಿಂದ ಮ. 12 ರವರೆಗೆ ಪತ್ರಿಕೆ–01 ಹಾಗೂ ಮ. 02 ರಿಂದ ಸಂಜೆ 04 ರವರೆಗೆ ಪತ್ರಿಕೆ–02 ರ ಪರೀಕ್ಷೆ ನಡೆಯಲಿದೆ. ನಗರದಲ್ಲಿ 24 ಪರೀಕ್ಷಾ ಕೇಂದ್ರಗಳು ಇದ್ದು, ಒಟ್ಟು 8098 ಅಭ್ಯರ್ಥಿಗಳು ಪರೀಕ್ಷೆ ಬರೆಯಲಿದ್ದಾರೆ. ಇದರಲ್ಲಿ 155 ಅಂಗವಿಕಲ ಅಭ್ಯರ್ಥಿಗಳು ಇದ್ದಾರೆ. 10 ಅಂಧ ವಿದ್ಯಾರ್ಥಿಗಳಿಗೆ ಸ್ಕ್ರೈಬ್ ಸೌಲಭ್ಯ ಒದಗಿಸಲಾಗಿದೆ. ಈಗಾಗಲೇ ಕರ್ನಾಟಕ ಲೋಕಸೇವಾ ಆಯೋಗದಿಂದ ಪರೀಕ್ಷಾ ಮಾಹಿತಿ ಕೈಪಿಡಿ ಬಂದಿದೆ. ಇದರ ಅನುಸಾರ ಪರೀಕ್ಷಾ ಕೇಂದ್ರಗಳ ಮುಖ್ಯಸ್ಥರು ಹಾಗೂ ಕೊಠಡಿ ಮೇಲ್ವಿಚಾರಕರಿಗೆ ತರಬೇತಿ ನೀಡಲು ಕ್ರಮ ಕೈಗೊಳ್ಳಲಾಗಿದೆ ಎಂದು ಶಿಕ್ಷಣ ಇಲಾಖೆ ಉಪನಿರ್ದೇಶಕ ಮಂಜುನಾಥ ಸಭೆಯಲ್ಲಿ ಮಾಹಿತಿ ನೀಡಿದರು.

# ಪೋಷಕರು ಮಕ್ಕಳಿಗಾಗಿ ಸಮಯ ಮೀಸಲಿರಿಸಿ

» ಚಿತ್ರದುರ್ಗ

ಪೋಷಕರು ಮಕ್ಕಳಿಗಾಗಿ ಸಮಯವನ್ನು ಮೀಸಲಿರಿಸಿಬೇಕು. ಪ್ರೀತಿಯಿಂದ ಅವರೊಡನೆ ವ್ಯವಹರಿಸುವ ಮೂಲಕ ಮಕ್ಕಳ ಉಜ್ವಲ ಭವಿಷ್ಯಕ್ಕಾಗಿ ಶ್ರಮಿಸಬೇಕು ಎಂದು ಜಿಲ್ಲಾ ಮಹಿಳಾ ಸಬಲೀಕರಣ ಘಟಕದ ಡಿ.ಗೀತಾ ಹೇಳಿದರು.

ಬುಧವಾರ ಭೀಮಸಮಯದ್ರ ಗ್ರಾಮದ ಹಾಲಮ್ಮ ಮಲ್ಲಿಕಾರ್ಜುನಪ್ಪ ಸಮುದಾಯ ಭವನದಲ್ಲಿ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ಭರಮಸಾಗರ ಶಿಶು ಅಭಿವೃದ್ಧಿ ಯೋಜನೆ ಮತ್ತು ರಾಷ್ಟ್ರೀಯ ಗ್ರಾಮೀಣ ಜೀವನೋಪಾಯ ಮಿಷನ್ ಸಂಯುಕ್ತ ಆಶ್ರಯದಲ್ಲಿ ಆಯೋಜಿಸಲಾದ, ಮಿಷನ್ ಶಕ್ತಿ ಯೋಜನೆಯ 100 ದಿನಗಳ ಜಾಗೃತಿ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು.

ಹದಿಹರೆಯದ ಮಕ್ಕಳ ಭಾವನಾತ್ಮಕ ಮನಸ್ಥಿತಿ ಸೂಕ್ಷ್ಮವಾಗಿರುತ್ತದೆ. ಅವರಿಗೆ ಸೂಕ್ತ ಮಾರ್ಗದರ್ಶನ ನೀಡಬೇಕು. ಕುಟುಂಬದಲ್ಲಿನ ವಿಘಟನೆ ಮಕ್ಕಳ ಮೇಲೆ ಪರಿಣಾಮ ಬೀರುತ್ತದೆ. ಮಕ್ಕಳ ಕಡೆ ಗಮನಹರಿಸದಿದ್ದರೆ ಅವರು ದುಶ್ಚಟಗಳ ದಾಸರಾಗಬಹುದು. ಪ್ರೀತಿ ಪ್ರೇಮ ಎಂಬ ಮೋಹಕ್ಕೆ ಒಳಗಾಗಬಹುದು. ಇದರಿಂದ ವಯಸ್ಕರಾಗುವ ಮುನ್ನವೇ ಬಾಲ್ಯ ವಿವಾಹ ಹಾಗೂ ಬಾಲ ತಾಯಂದಿರಾಗುವ ಪರಿಸ್ಥಿತಿಗೆ ಎದುರಾಗುತ್ತದೆ. ಪೋಷಕರ ಮೇಲೆ ಮಕ್ಕಳಿಗೆ ನಂಬಿಕೆ ಇಲ್ಲದೇ ಹೋದರೆ ಅಥವಾ ಭಯದ ಮನೋಭವ ಇದ್ದರೆ ತಮ್ಮ ಮೇಲಿ ಆಗುತ್ತಿರುವ ದೌರ್ಜನ್ಯಗಳನ್ನು ಸಹ ಹೇಳಿಕೊಳ್ಳದೇ ಹೋಗಬಹುದು. ಆದ್ದರಿಂದ ಪೋಷಕು ಹೆಚ್ಚು ಜಬ್ದಾರಿಯಿಂದ ವರ್ತಿಸಬೇಕು ಎಂದು ಡಿ.ಗೀತಾ ಹೇಳಿದರು. ಇದೇ ವೇಳೆ ಬಾಲ್ಯವಿವಾಹ, ಬಾಲತಾಯಂದಿರು ಹಾಗೂ ಮಕ್ಕಳ ಮೇಲಿನ ದೌರ್ಜನ ಪ್ರಕರಣಗಳು ಕಂಡುಬಂದರೆ ಮಕ್ಕಳ ಸಹಾಯವಾಣಿ ಸಂಖ್ಯೆ 1098 ಕರೆ ಮಾಡಿ ತಿಳಿಸಬೇಕು. ಮಹಿಳೆಯರ ಮತ್ತು ಮಕ್ಕಳ ಮಾರಾಟ ನಿಷೇಧ ಕಾಯ್ದೆ ಬಗ್ಗೆ ಮಾಹಿತಿ ನೀಡಿದರು ಹಾಗೂ ಹೆಣ್ಣು ಮಕ್ಕಳ ಭ್ರೂಣ ಹತ್ಯೆಯನ್ನು ತಡೆಯುವ ನಿಟ್ಟಿನಲ್ಲಿ ಎಲ್ಲರೂ ಸಹ ಕೈಜೋಡಿಸಬೇಕು. ಮಹಿಳೆಯರ ಮೇಲಿನ ದೌರ್ಜನ ತಡೆಯಲು ಸಹಾಯವಾಣಿ ಸಂಖ್ಯೆ 181 ಈ ನಂಬರಿಗೆ ಕರೆ ಮಾಡಬಹುದು. ಹೀಗೆ ಕರೆ ಮಾಡಿದವರು ಹೆಸರು ಗೌಪ್ಯವಾಗಿ ಇರಿಸಲಾಗುವುದು ಎಂದರು.

ಕಾರ್ಯಕ್ರಮದಲ್ಲಿ ವಲಯ ಮೇಲ್ವಿಚಾರಕಿ ರಂಜಿನಿ ಸಂಪತ್, ಒಕ್ಕೂಟದ ಅಧ್ಯಕ್ಷೆ ಉಷಾ, ಮಿಷನ್ ಶಕ್ತಿ ಸಂಯೋಜಕ ವಿನಯ್ ಹಾಗೂ ಸಂಘದ ಪದಾಧಿಕಾರಿಗಳು ಹಾಜರಿದ್ದರು.




### "ಖತರ್ನಾಕ್ ಬೈಕ್ ಕಳ್ಳನ ಬಂಧನ,ಮೂರು ಬೈಕ್ ಗಳು ವಶ"



» ಹೊಸದುರ್ಗ

ಪೊಲೀಸರ ಮಿಂಚಿನ ಕಾರ್ಯಾಚರಣೆಯಲ್ಲಿ ಬೈಕ್ ಕಳ್ಳ ನನ್ನ ಬಂಧಿಸಿ ಅವನಿಂದ ಕಳುವಾಗಿದ್ದ ಮೂರು ಬೈಕ್ ಗಳನ್ನು ಪೋಲೀಸರು ವಶಪಡಿಸಿಕೊಂಡಿದ್ದಾರೆ. ಬೈಕ್ ಕಳವು ಮಾಡಿದ ಅಸ್ವಾಮಿ ಸುದರ್ಶನ್ ಹೊಸದುರ್ಗದ ಕಲ್ಲೇಶ್ವರ ಬಡಾವಣೆ ನಿವಾಸಿ, ಇವನು ದುಶ್ಚಟಗಳಿಗೆ ಬಲಿಯಾಗಿ ಹಣ ಸಿಗದಿದ್ದಾಗ ಹೊಸದುರ್ಗದ ಕೆ ಎಸ್ ಆರ್ ಟಿ ಸಿ ಬಸ್ ನಿಲ್ದಾಣ, ಹಾಗೂ ವಿವಿಧ ಬಡಾವಣೆಗಳಲ್ಲಿ ಬೈಕ್ ಕಳುವು ಮಾಡುತ್ತಿದ್ದನು. ಕಳ್ಳನಿಂದ ಮೂರು ಬೈಕ್ ಗಳನ್ನು ವಶಪಡಿಸಿಕೊಂಡಿದ್ದು ಪೊಲೀಸರು ಕೇಸು ದಾಖಲಿಸಿ ಆಸಾಮಿಗೆ ಜೈ□□□□ ಊಟದ ರುಚಿ ತೋರಿಸಿದ್ದಾರೆ. ಈ ಬಗ್ಗೆ ಹೊಸದುರ್ಗ ಪೊಲೀಸ್ ಇನ್ಸ್ಪೆಕ್ಟರ್ ಎನ್ ತಿಮ್ಮಣ್ಣ ಪ್ರತಿಕ್ರಿಯಿಸಿ ಚಿತ್ರದುರ್ಗ ಜಿಲ್ಲಾ ಎಸ್ ಪಿ ಸಾಹೇಬರ ಆದೇಶದಂತೆ ನಮ್ಮ ಪೊಲೀಸ್ ಠಾಣೆ ವ್ಯಾಪ್ತಿಯಲ್ಲಿ ಈಗಾಗಲೇ ಬೈಕ್ಗಳನ್ನ ಕಳುವು ಮಾಡಿದ ಕಳ್ಳರನ್ನ ಬಂಧಿಸಿದ್ದು ನಮ್ಮ ಪೊಲೀಸ್ ಸಿಬ್ಬಂದಿ ಹಗಲು ರಾತ್ರಿಯೆನ್ನದೆ ಹೊಸದುರ್ಗ ನಗರ ಮತ್ತು ತಾಲೂಕಿನಾದ್ಯಂತ ಗಸ್ತು ತಿರುಗಿ ಯಾವುದೇ ಕಾನೂನು ಬಾಹಿರ ಚಟುವಟಿಕೆಗಳು ನಡೆಯದಂತೆ ಎಚ್ಚರಿಕೆ ವಹಿಸಿದ್ದೇವೆ. ಸಾರ್ವಜನಿಕ ಸ್ಥಳಗಳು ತಾಲೂಕಿನ ಎಲ್ಲಾ ದೇವಸ್ಥಾನಗಳು, ಹಾಗೂ ತಮ್ಮಗಳ ಅಂಗಡಿ ಮುಂಗಟ್ಟುಗಳ ಮುಂಭಾಗದಲ್ಲಿ ಕಡ್ಡಾಯವಾಗಿ ಸಿ ಸಿ ಕ್ಯಾಮರಾಗಳನ್ನ ಅಳವಡಿಸಿಕೊಳ್ಳಬೇಕು. ಎಂದರು.ಕಾರ್ಯಾಚರಣೆಯಲ್ಲಿ ಪೊಲೀಸ್ ಸಬ್ ಇನ್ಸ್ಪೆಕ್ಟರ್ ಮಹೇಶ್ ಕುಮಾರ್, ಸಿಬ್ಬಂದಿಗಳಾದ ಕುಮಾರ್ ಜೈರಾಜ್, ಗಂಗಾಧರ್ ಸತೀಶ್ ನಟರಾಜ್ ಉಮೇಶ್ ಇದ್ದರು.

### ತ್ರಿಬಲ್ ರೈಡಿಂಗ್, ವ್ಹೀಲಿಂಗ್ ನಿಷಿದ್ಧ, ಸಂಚಾರಿ ನಿಯಮ ಪಾಲಿಸಲು ಸೂಚನೆ

**ದಾವಣಗೆರೆ:** ದಾವಣಗೆರೆ ನಗರದಲ್ಲಿ ವೇಗದ ವಾಹನ ಚಾಲನೆ, ವೀಲಿಂಗ್, ದ್ವಿಚಕ್ರ ವಾಹನಗಳಲ್ಲಿ ತ್ರಿಬಲ್ ರೈಡಿಂಗ್ ಸೇರಿದಂತೆ ಸಂಚಾರ ನಿಯಮ ಉಲ್ಲಂಘಿಸಿ ಇತರೆ ಬಳಕೆದಾರರ ಜೀವಕ್ಕೆ ತೊಂದರೆಯಾಗುವಂತಹ ಅಪಘಾತ ಪ್ರಕರಣಗಳು ವರದಿಯಾಗುತ್ತಿವೆ. ಮುಂದಿನ ದಿನಗಳಲ್ಲಿ ಸಾರಿಗೆ ಇಲಾಖೆಯಿಂದ ಗಣನಿಯವಾಗಿ ವಾಹನಗಳ ತಪಾಸಣೆ ಕೈಗೊಂಡು ಸಂಚಾರಿ ನಿಯಮಗಳನ್ನ ಉಲ್ಲಂಘನೆ ಮಾಡುವ ವಾಹನಗಳ ಮೇಲೆ ಕಾನೂನು ಕ್ರಮ ಕೈಗೊಳ್ಳಲಾಗುತ್ತದೆ ಎಂದು ಪ್ರಾದೇಶಿಕ ಸಾರಿಗೆ ಅಧಿಕಾರಿ ಪ್ರಮುತೇಶ್ ತಿಳಿಸಿದ್ದಾರೆ.

## ಪ್ರಮುಖ ಸುದ್ದಿ

# ಜನಪ್ರತಿನಿಧಿಗಳ ವರ್ತನೆಗೆ ಓಬಣ್ಣನ ಹಳ್ಳಿ ಗ್ರಾಮಸ್ಥರ ಕಿಡಿ

» ಚಿತ್ರದುರ್ಗ

ತಾಲ್ಲೂಕಿನ ಓಬಣ್ಣನ ಹಳ್ಳಿಯಲ್ಲಿ ಇತ್ತಿಚೆಗೆ ಸುರಿದ ಮಳೆಯಿಂದಾಗಿ ಅಲ್ಲಿನ ಮನೆಗಳು ಮಳೆಯ ನೀರಿನಿಂದ ಜಲಾವೃತವಾಗಿದ್ದವು, ಇದರಿಂದ ಮನೆಯಲ್ಲಿ ನಿಲ್ಲಲು ಜಾಗ ವಿಲ್ಲದೆ ಜನತೆ ಪರದಾಡಿದರು. ಮನೆಯಲ್ಲಿ ಇದ್ದ ಸಾಮಾನುಗಳು ಸಹಾ ನೀರಿನಲ್ಲಿ ಹೋಗಿದೆ. ಇಷ್ಟಾದರೂ ಸಹ ಸ್ಥಳಕ್ಕೆ ಯಾವ ಒಬ್ಬ ಜನಪ್ರತಿನಿಧಿ ಭೇಟಿ ನೀಡದಿರುವುದಕ್ಕೆ ಅಲ್ಲಿನ ಗ್ರಾಮಸ್ಥರು ಆಕ್ರೋಶವನ್ನು ವ್ಯಕ್ತಪಡಿಸಿದ್ದಾರೆ.

ಚಿತ್ರದುರ್ಗ ತಾಲೂಕು. ಓಬಣ್ಣನಹಳ್ಳಿ ಸುತ್ತಾ–ಮುತ್ತಲೂ ಸಹಾ ಗುಡ್ಡದಿಂದ ಇತ್ತೀಚೆಗೆ ಬಿದ್ದ ಮಳೆಯಿಂದಾಗಿ ಅನೇಕ ಮನೆಗಳು ಜಲಾವೃತಗೊಂಡು ಹಾನಿಗೊಳಗಾಗಿವೆ. ಇದರಿಂದಾಗಿ ಅಲ್ಲಿನ ಜನ ಜೀವನ ಅಸ್ತವ್ಯಸ್ತವಾಗಿದೆ, ಈ ಮಳೆಯಿಂದಾಗಿ ಗ್ರಾಮದಲ್ಲಿನ ಮನೆಗಳು ಹಾನಿಯಾಗಿದ್ದು ಹಲವಾರು ಮನೆಗಳು ಪೂರ್ಣ ಪ್ರಮಾಣದಲ್ಲಿ ಹಾನಿಯಾಗಿವೆ, ಮಳೆಯ ದಿನದಂದು ಮನೆಯವರು ಪೂರ್ಣವಾಗಿನೀರಿನಿಂದಜಾಗರಣೆಯನ್ನು ಮಾಡಿದ್ದಾರೆ. ಮನೆಯಲ್ಲಿ ಯಾವ ವಸ್ತುವು ಸಃಆ ಉಳಿದಿಲ್ಲ ಎಲ್ಲವು ಸಹಾ ವರುಣನ ಪಾಲಾಗಿದೆ. ನಿಲ್ಲಲು ನೆಲೆ ಇಲ್ಲ, ಉಡಲು ವಸ್ತ್ರ ಇಲ್ಲ ತಿನ್ನಲು ಆಹಾರ ಇಲ್ಲದಾಗಿದೆ ನಮ್ಮ ಬಗ್ಗೆ ಯಾರು ಸಹಾ ನೋಡುತ್ತಿಲ್ಲ, ಪ್ರಕೃತಿಯ ವಿಕೋಪಕ್ಕೆ ಬಲಿಯಾದ ನಮ್ಮ ಬದುಕು ಆತಂತ್ರವಾಗಿದೆ ಎಂದು ಗೋಳಾಡಿದರು.

ಗ್ರಾಮದಿಂದ ಇಂದು ಜಿಲ್ಲಾಧಿಕಾರಿಗಳನ್ನು ಭೇಟಿ ಮಾಡಲು ಬಂದ ಗ್ರಾಮಸ್ಥರು ನಮ್ಮನ್ನು ಯಾರು ಸಹಾ ನೋಡುತ್ತಿಲ್ಲ ನಮ್ಮ ಕಷ್ಟ ಕೇಳುವವರಿಲ್ಲ, ನಮ್ಮಿಂದ ಚುನಾಯಿತರಾದ ಜನಪ್ರತಿನಿಧಿಗಳು ಸಹಾ ನಮ್ಮ ಕಡೆ ತಿರುಗಿ ನೋಡಿಲ್ಲ, ಘಟನೆ ನಡೆದು ಹಲವಾರು ದಿನವಾದರೂ ಸಹಾ ಅಂದು ಯಾವ ಸ್ಥಿತಿಯಲ್ಲಿ ಇತ್ತು ಇಂದು ಸಹಾ ಅದೇ ಸ್ಥಿತಿಯಲ್ಲಿ ಇದೆ, ಇರಲು ಮನೆ ಇಲ್ಲ ನಮ್ಮಲ್ಲಿ ಇದ್ದ ಬಟ್ಟೆಗಳು ನೀರು ಪಾಲಾಗಿವೆ, ಮನೆಯಲ್ಲಿ ಮಕ್ಕಳ ಪುಸ್ತಕ ಸಹಾ ನೀರಿನಲ್ಲಿ ಕೊಚ್ಚಿ ಹೋಗಿದೆ. ಗ್ರಾಮದ ಶಿಕ್ಷಕರು ನಮಗೆ ಬಟ್ಟೆ, ಮಕ್ಕಳಿಗೆ ಪುಸ್ತಕಗಳನ್ನು ನೀಡುವುದರ ಮೂಲಕ ನೆರವಿನ ಹಸ್ತವನ್ನು ನೀಡಿದ್ದಾರೆ. ಜಿಲ್ಲಾ ಪಂಚಾಯಿತಿ ಮಾಜಿ ಅಧ್ಯಕ್ಷೆ ಸೌಭಾಗ್ಯ ಬಸವರಾಜನ್‌ರವರು ಹಣದ ಸಹಾಯ ಮಾಡಿದ್ದರೆ ಇದರೊಂದಿಗೆ ಭೋವಿ ಗುರುಪೀಠದವರು ಅಹಾರದ ಕಿಟ್ ನೀಡಿದ್ದಾರೆ ಎಂದರು.

ಇದಕ್ಕೆ ಸ್ಪಂದಿಸಿದ ಜಿಲ್ಲಾಧಿಕಾರಿಗಳು ಸ್ಥಳದಲ್ಲಿದ್ದ ತಹಶೀಲ್ದಾರ್ ರವರಿಂದು ಅಲ್ಲಿನ ಸದ್ಯದ ಪರಿಸ್ಥಿತಿಯನ್ನು ತಿಳಿದುಕೊಂಡು ಅಲ್ಲಿಗೆ ಜೆಸಿಬಿಯನ್ನು ಕಳುಹಿಸಿ ರಸ್ತೆ, ಚರಂಡಿಯನ್ನು ಸರಿಪಡಿಸಿ ಮನೆಯಲ್ಲಿ ಇರುವ ಮಣ್ಣನ್ನು ಸಹಾ ತೆಗೆಯುವ ಕಾರ್ಯವನ್ನು ಮಾಡಿ ತೊಂದರೆಗೆ ಒಳಗಾದವರಿಗೆ ಆಹಾರ ಮತ್ತು ಉಳಿದುಕೊಳ್ಳುವ ವ್ಯವಸ್ಥೆಯನ್ನು ಮಾಡಿ ಎಂದು ಸೂಚನೆಯನ್ನು ನೀಡಿ ನಾನು ಸಹಾ ಸ್ಥಳಕ್ಕೆ ಬಂದು ಭೇಟಿ ಮಾಡುತ್ತೇನೆ ಎಂದು ತಿಳಿಸಿದರು.



# ಚಿತ್ರದುರ್ಗ ತಹಶೀಲ್ದಾರ್ ಕಚೇರಿಯಲ್ಲಿ ಉಚಿತ ಕಾನೂನು ಸಲಹಾ ಕೇಂದ್ರ ಆರಂಭ

» **ಚಿತ್ರದುರ್ಗ**

ಚಿತ್ರದುರ್ಗ ತಾಲ್ಲೂಕು ತಹಶೀಲ್ದಾರ್ ಕಚೇರಿಯಲ್ಲಿ ಉಚಿತ ಕಾನೂನು ಸಲಹಾ ಕೇಂದ್ರ ಬುಧವಾರ ಆರಂಭವಾಯಿತು.

ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ವತಿಯಿಂದ ಚಿತ್ರದುರ್ಗ ತಾಲ್ಲೂಕಿನ ಸಾರ್ವಜನಿಕರಿಗೆ ಅನುಕೂಲವಾಗಲಿ ಎಂಬ ಉದ್ದೇಶದಿಂದ ಉಚಿತ ಕಾನೂನು ಸಲಹಾ ಕೇಂದ್ರ ಪ್ರಾರಂಭ ಮಾಡಲಾಗಿದ್ದು, ಜಿಲ್ಲಾ ಪ್ರಧಾನ ಮತ್ತು ಸತ್ರ ನ್ಯಾಯಾಧೀಶರು ಹಾಗೂ ಜಿಲ್ಲಾ ಕಾನೂನು ಸೇವಾ ಪ್ರಾಧಿಕಾರದ ಅಧ್ಯಕ್ಷರಾದ ರೋಣ ವಾಸುದೇವ ಅವರು ಉದ್ಘಾಟಿಸಿದರು.

ಚಿತ್ರದುರ್ಗ ತಹಶೀಲ್ದಾರ್ ಕಚೇರಿಯಲ್ಲಿ ತೆರೆಯಲಾಗಿರುವ ಉಚಿತ ಕಾನೂನು ಸಲಹಾ ಕೇಂದ್ರದಲ್ಲಿ ಸೋಮವಾರ ಹಾಗೂ ಶುಕ್ರವಾರ ವಾರದಲ್ಲಿ ಎರಡು ದಿನಗಳ ಕಾಲ ಬೆಳಿಗ್ಗೆ 10 ರಿಂದ ಸಂಜೆ 6 ರವರೆಗೆ ಇಬ್ಬರು ವಕೀಲರು ಕಾರ್ಯ ನಿರ್ವಹಿಸುವರು.

ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ವತಿಯಿಂದ ಉಚಿತ ಕಾನೂನು ನೆರವು ಮತ್ತು ಸಲಹೆ ನೀಡಲಾಗುತ್ತದೆ. ಅರ್ಹ ವ್ಯಕ್ತಿಗಳಿಗೆ ಕಾನೂನು ಸಲಹೆಗಳನ್ನು ಉಚಿತವಾಗಿ ಕೊಡುವುದಲ್ಲದೆ ಆತನ ಪರವಾಗಿ ನ್ಯಾಯಾಲಯದಲ್ಲಿ ದಾವೆಯನ್ನು ದಾಖಲು ಮಾಡಲು ಅಥವಾ ಆತನ ವಿರುದ್ಧ ಹೂಡಿರುವ ದಾವೆಯಲ್ಲಿ ತನ್ನ ಪರವಾಗಿ ತನ್ನ ಹಕ್ಕನ್ನು ಪ್ರತಿಪಾದಿಸಲು ಅರ್ಹ ವ್ಯಕ್ತಿಗಳಿಗೆ ಕಾನೂನು ಸೇವೆಗಳ ಪ್ರಾಧಿಕಾರವು ಉಚಿತವಾಗಿ ವಕೀಲರನ್ನು ನೇಮಕ ಮಾಡುತ್ತದೆ.



ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡಕ್ಕೆ ಸೇರಿದವರು, ಕಾರ್ಖಾನೆಯ ಕಾರ್ಮಿಕರು, ಮಹಿಳೆ ಮತ್ತು ಮಕ್ಕಳು, ವಾರ್ಷಿಕ ಆದಾಯ ರೂ.3,00,000/–ಗಳಿಗಿಂತ ಕಡಿಮೆ ಇರುವ ಎಲ್ಲಾ ವರ್ಗದ ಜಾತಿಯ ಜನರು, ಮಾನಸಿಕ ಅಥವಾ ಬೇರಾವುದೇ ನ್ಯೂನತೆಯನ್ನುಹೊಂದಿರುವವರು,ಗುಂಪು ಘರ್ಷಣೆ, ಗಲಭೆ, ಪ್ರವಾಹ, ಭೂಕಂಪ, ಕೈಗಾರಿಕಾ ವಿನಾಶ ಮುಂತಾದವುಗಳಿಗೆ ತುತ್ತಾದವರು, ದೈಹಿಕ ವ್ಯಾಪಾರ ಅಥವಾ ಜೀತಕ್ಕೊಳಗಾದವರು, ಶಿಕ್ಷಾ ಬಂಧಿಗಳು ಹಾಗೂ ವಿಚಾರಣಾಧೀನ ಬಂಧಿಗಳು, ರಕ್ಷಣಾ ಗೃಹ, ಮನೋರೋಗಿಗಳ ಆಸ್ಪತ್ರೆ ಮುಂತಾದವುಗಳಲ್ಲಿ ಅಭಿರಕ್ಷೆಯಲ್ಲಿರುವವರು, ಇದಲ್ಲದೆ ಕ್ರಿಮಿನಲ್ ಪ್ರಕರಣದಲ್ಲಿನ ಗಾಯಾಳು ಸಂತ್ರಸ್ಥರಿಗೆ ಕೂಡ ಉಚಿತ ಕಾನೂನು ಸಲಹೆ ಮತ್ತು ನೆರವು ನೀಡಲಾಗುವುದು.

ಉಚಿತ ಕಾನೂನು ನೆರವು ಅಥವಾ ಸಲಹೆ ಪಡೆಯಲು ಅರ್ಹರಾಗಿದ್ದಲ್ಲಿ ಸಮೀಪದ ನ್ಯಾಯಾಲಯದ ಆವರಣದಲ್ಲಿರುವ ಜಿಲ್ಲಾ, ತಾಲ್ಲೂಕು ಕಾನೂನು ಸೇವೆಗಳ ಪ್ರಾಧಿಕಾರಕ್ಕೆ ಅರ್ಜಿಯನ್ನು ಸಲ್ಲಿಸಿ, ಉಚಿತ ಕಾನೂನು ನೆರವು ಅಥವಾ ಸಲಹೆ ಪಡೆಯಬಹುದು. ಈ ಅರ್ಜಿಗೆ ಯಾವುದೇ ಶುಲ್ಕ ಇರುವುದಿಲ್ಲ. ಉಚಿತ ದೂರವಾಣಿ ಸಂಖ್ಯೆ 15100 ಕ್ಕೆ ಕರೆ ಮಾಡಬಹುದಾಗಿದೆ. ಹೆಚ್ಚಿನ ಮಾಹಿತಿಗಾಗಿ ಚಿತ್ರದುರ್ಗ ಜಿಲ್ಲಾ ನ್ಯಾಯಾಲಯ ಸಂಕೀರ್ಣದಲ್ಲಿರುವ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ದೂರವಾಣಿ ಸಂಖ್ಯೆ 08194–222322 ಗೆ ಸಂಪರ್ಕಿಸಬಹುದಾಗಿದೆ.

ಈ ಸಂದರ್ಭದಲ್ಲಿ ಹಿರಿಯ ಸಿವಿಲ್ ನ್ಯಾಯಾಧೀಶರು ಹಾಗೂ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ಎಂ.ವಿಜಯ್, ಉಪವಿಭಾಗಾಧಿಕಾರಿ ಎಂ.ಕಾರ್ತಿಕ್, ತಹಶೀಲ್ದಾರ್ ಡಾ.ನಾಗವೇಣಿ, ಗ್ರೇಡ್–2 ತಹಶೀಲ್ದಾರ್ ನಾಗರಾಜ್ ಸೇರಿದಂತೆ ಮತ್ತಿತರರು ಇದ್ದರು.

## ಫಾಸ್ಟ್ ನ್ಯೂಸ್

### ಅಂಚೆ ಕಚೇರಿಯಲ್ಲಿ ಮಾಸಾಶನ ಪಡೆಯುವವರಿಗೆ ಶಾಕ್



» **ಚಳ್ಳಕೆರೆ**

ಚಳ್ಳಕೆರೆ ನಗರದಾದ್ಯಂತ ವೃದ್ಧಾಪ್ಯ, ವಿಧವವೇತನವೂ ಸೇರಿದಂತೆ ಸರ್ಕಾರದಿಂದ ಬರುವ ಮಾಸಾಶನವನ್ನು ತ್ಯಾಗರಾಜ ನಗರದಲ್ಲಿರುವ ಪ್ರಧಾನ ಅಂಚೆ ಕಚೇರಿಯಲ್ಲಿ ಪ್ರತಿತಿಂಗಳು ವಿತರಣೆ ಮಾಡಲಾಗುತ್ತಿತ್ತು. ನಗರದ ವಿವಿಧೆಡೆಗಳಿಂದ ಬಂದ ವಯೋವೃದ್ದರಿಗೆ ಅಂಚೆ ಕಚೇರಿಯ ಒಳಗೆ ಪ್ರವೇಶಿಸಿ ತಮ್ಮ ಹಣವನ್ನು ಪಡೆಯುವ ವ್ಯವಸ್ಥೆ ಮಾಡಲಾಗಿತ್ತು. ಇದರಿಂದ ಬಿಸಿಲು, ಗಾಳಿ, ಮಳೆಗೆ ರಕ್ಷಣೆ ಪಡೆದು ವಯೋವೃದ್ದರು ತಮ್ಮ ಹಣ ಪಡೆಯುತ್ತಿದ್ದರು. ಆದರೆ, ಇತ್ತೀಚಿನ ದಿನಗಳಲ್ಲಿ ಅಂಚೆ ಕಚೇರಿ ಅಧಿಕಾರಿಗಳು ಯಾವುದೇ ಕಾರಣವನ್ನು ನೀಡದೆ ಮಾಸಾಶನ ಬಯಸಿಬರುವ ವೃದ್ದರಿಗೆ ಅಂಚೆ ಕಚೇರಿ ಹೊರಭಾಗದ ಮೂಲೆಯೊಂದರಲ್ಲಿ ನಿಂತು ಕಿಟಕಿಯ ಮೂಲಕವೇ ಹಣ ಪಡೆಯುವ ವ್ಯವಸ್ಥೆಯನ್ನು ಮಾಡಿದ್ದಾರೆ. ಇದರಿಂದ ವಯೋವೃದ್ದರು, ಅಂಗವಿಕಲರು ಬಿಸಿಲು, ಮಳೆ ಲೆಕ್ಕಿಸದೆ ಗಂಟೆಗಟ್ಟಲೆ ನಿಂತು ತಮ್ಮ ಪಾಲಿನ ಮಾಸಾಶನವನ್ನು ಪಡೆಯುವ ಸ್ಥಿತಿ ಉಂಟಾಗಿದೆ. ಈ ಬಗ್ಗೆ ಮನನೊಂದ ಗಂಗಮ್ಮ, ಸುಲೋಚನ, ಬೋರಣ್ಣ, ಸುರೇಶ್ ಮುಂತಾದವರು ಅಂಚೆ ಕಚೇರಿಯ ಈ ದಿಢೀರ್ ಬದಲಾವಣೆಗೆ ಅಸಮದಾನವನ್ನು ವ್ಯಕ್ತಪಡಿಸಿದ್ದಾರೆ. ವಿಶೇಷವೆಂದರೆ ಯಾರಿಗೆ ಶಕ್ತಿ ಇದೆಯೋ ಅವರು ಮುಂದೆ ಬಂದು ಹಣ ಪಡೆಯಬಹುದಾಗಿದೆ. ಸರಥಿಸಾಲಿನಲ್ಲಿ ನಿಲ್ಲಿಸಿ ಹಣ ಕೊಡಿಸುವ ವ್ಯವಸ್ಥೆ ಇಲ್ಲಿ ಇಲ್ಲ. ಆದ್ದರಿಂದ ಅಂಚೆ ಕಚೇರಿ ಹಿರಿಯ ಅಧಿಕಾರಿಗಳು ಸ್ಥಳಕ್ಕೆ ಭೇಟಿ ನೀಡಿ ಪರಿಶೀಲನೆ ನಡೆಸಿ ಪ್ರತಿತಿಂಗಳ ಮಾಸಾಶವನ್ನು ಕಚೇರಿಯ ಒಳ ಆವರಣದಲ್ಲೇ ಪಡೆಯುವ ವ್ಯವಸ್ಥೆ ಮಾಡಬೇಕೆಂದು ವಿನಂತಿಸಿದ್ದಾರೆ.

### ಬೋನಿಗೆ ಸೆರೆ ಸಿಕ್ಕ ಕರಡಿ: ನಿಟ್ಟುಸಿರು ಬಿಟ್ಟ ಸಾರ್ವಜನಿಕರು



» **ಹೊಸದುರ್ಗ**

ಪಟ್ಟಣದ ಕುಂಚಿಟಿಗ ಮಠದ ಸಮೀಪ ಕಳೆದ ಸುಮಾರು ಎರಡು ತಿಂಗಳಿನಿಂದ ಗುಡ್ಡದ ತಪ್ಪಲಿನಲ್ಲಿ ಸೇರಿಕೊಂಡಿದ್ದ ಕರಡಿಯ ಕಾರ್ಯಾಚರಣೆ ನಡೆಸಿದ ಅರಣ್ಯ ಇಲಾಖೆಯ ಸಿಬ್ಬಂಧಿಯವರು ಕಳೆದ 15 ದಿನಗಳ ಹಿಂದೆ ಅಳವಿಡಿದ್ದ ಬೋನಿಗೆ ಸುಮಾರು 5 ರಿಂದ 6 ವರ್ಷದ ಕರಡಿಯೊಂದು ಬುಧವಾರ ಸೆರೆಯಾಗಿದೆ. ಕಳೆದ 15 ದಿನಗಳ ಹಿಂದೆ ಪಟ್ಟಣದ ಇಂಡಸ್ಟ್ರಿಯಲ್ ಪ್ರದೇಶದಲ್ಲಿ ಹಗಲಿನಲ್ಲೆ ತಿರುಗಾಡುತ್ತಿದ್ದ ದೈತ ಕರಡಿಯನ್ನ ಬೋನ್ ಅಳವಡಿಸಿ ಇಡಿಯಲಾಗಿತ್ತು ಇದಾದ ನಂತರ ಪದೆ ಪದೇ ಕುಂಚಿಟಿಗ ಮಠದ ಸಮೀಪ ಮುಂಜಾನೆ ಮತ್ತು ಸಂಜೆ ಸಮಯದಲ್ಲಿ ಕರಡಿ ಕಾಣಿಸಿಕೊಂಡು ಓಡಾಡುವ ಸಾರ್ವಜನಿಕರನ್ನ ಮತ್ತು ಮಠಕ್ಕೆ ಬರುವ ಹೋಗುವ ಭಕ್ತರಲ್ಲಿ ತೀರ್ವ ಅತಂಕವನ್ನ ಮೂಡಿಸಿತ್ತು ಇದರಿಂದ ಶ್ರೀಮಠ ಶ್ರೀ ಶಾಂತವೀರಸ್ವಾಮೀಜಿ ಸೇರಿದಂತೆ ಸಾರ್ವಜನಿಕರು ಅರಣ್ಯ ಇಲಾಖೆಯವರಿಗೆ ದೂರು ನೀಡಿದ್ದರು. ವಿಷಯ ತಿಳಿದ ನಂತರ ಆ ಪ್ರದೇಶದಲ್ಲಿ ಬೋನು ಅಳವಡಿಸಿ ಬಿಡಲಾಗಿತ್ತು ಬೋನಿನಲ್ಲಿ ಇಟ್ಟಿದ್ದ ಅಲಸಿನಹಣ್ಣಿನ ವಾಸನೆಗೆ ಬೋನ್ ಒಳಗೆ ಹೋದ ಕರಡಿ ಸೆರೆಯಾಗಿದೆ ಕಾರ್ಯಾಚರಣೆಯಲ್ಲಿ ಅರಣ್ಯಾಧಿಕಾರಿ ಸುನೀಲ್ ಕುಮಾರ್,ಉಪ ವಲಯ ಅರಣ್ಯಾಧಿಕಾರಿ ಶಂಭುಲಿಂಗ ಹಾಗೂ ಸಿಬ್ಬಂಧಿಯವರು ಭಾಗವಹಿಸಿದ್ದರು.ಸೆರೆಯಾಗಿರುವ ಕರಡಿಯನ್ನು ಉಪ ಅರಣ್ಯ ಸಂರಕ್ಷಣಾಧಿಕಾರಿಗಳ ಆದೇಶದಂತೆ ಮುಂದಿನ ಕಾರ್ಯಾಚರಣೆ ಮಾಡಲಾಗುವುದು ಎಂದು ಅರಣ್ಯಾಧಿಕಾರಿ ತಿಳಿಸಿದ್ದಾರೆ.

"ಶ್ರೀಮಠದ ಸುತ್ತಾ ಮುತ್ತಾ ಕಳೆದ ಸುಮಾರು ಎರಡು ತಿಂಗಳಿನಿಂದಲೂ ಸಹಾ ಕರಡಿಗಳ ಕಾಟ ಶ್ರೀ ಮಠದ ಪ್ರದೇಶದಲ್ಲಿ ಹೆಚ್ಚಾಗಿತ್ತು ಇದರಿಂದ ಶ್ರೀಮಠಕ್ಕೆ ಬರುವ ಹೋಗುವ ಭಕ್ತರಲ್ಲಿ ಹಾಗೂ ದಿನ ನಿತ್ಯ ಮುಂಜಾನೆ ಮತ್ತು ಸಂಜೆ ವಾಯು ವಿಹಾರಕ್ಕೆ ಬರುತ್ತಿದ್ದ ಸಾಕಷ್ಟು ಮಂದಿಗೆ ಅತಂಕ ಮೂಡಿಸಿತ್ತು ಸಂಜೆ ಸಮಯದಲ್ಲಿ ಶ್ರೀ ಮಠದ ಆವರಣದಲ್ಲಿ ಎರಡು ಮೂರು ಕರಡಿಗಳು ಒಡಾಡಿದ್ದುಂಟು ಈ ಹಿನ್ನೆಲೆಯಲ್ಲಿ ಇಲ್ಲಿನ ಅರಣ್ಯ ಇಲಾಖೆಯವರಿಗೆ ಈ ವಿಚಾರವಾಗಿ ಪದೇ ಪದೇ ತಿಳಿಸಲಾಗಿತ್ತು ಇಲಾಖೆಯವರು ಕಳೆದ 15 ದಿನಗಳ ಹಿಂದೆ ಇಲ್ಲಿ ಬೋನ್ ಅಳವಡಿಸಿದ್ದರು ಬುಧವಾರ ಕರಡಿ ಸೆರೆಯಾಗಿದೆ ಗುಡ್ಡದ ತಪ್ಪಲಿನಲ್ಲಿ ಶ್ರೀ ಮಠ ಇರುವುದರಿಂದ ಇನ್ನು ಸಾಕಷ್ಟು ಕರಡಿಗಳು ಇವೆ ಎಂಬುದು ಭಕ್ತರು ಹೇಳುತ್ತಾರೆ.

» **ಶ್ರೀ ಶಾಂತವೀರಸ್ವಾಮೀಜಿ**

# ಹಿರಿಯ ನಾಗರೀಕರನ್ನು ಗೌರವಿಸುವುದು ನಮ್ಮ ಜವಾಬ್ದಾರಿ: ಡಾ.ಚಂದ್ರಕಾಂತ ನಾಮಸಮುದ್ರ

» **ಚಿತ್ರದುರ್ಗ**

ಹಿರಿಯ ನಾಗರೀಕರನ್ನು ಗೌರವಯುತವಾಗಿ ಕಾಣುವುದು ಹಾಗೂ ಅವರಿಗೆ ಚಿಕಿತ್ಸೆ ಕೊಡಿಸುವುದು ನಮ್ಮ ಜವಾಬ್ದಾರಿ ಎಂದು ಜಿಲ್ಲಾ ಆಯುಷ್ ಅಧಿಕಾರಿ ಡಾ. ಡಾ.ಚಂದ್ರಕಾಂತ ನಾಗಸಮುದ್ರ ಹೇಳಿದರು.

ಚಿತ್ರದುರ್ಗ ತಾಲ್ಲೂಕು ಡಿ.ಮದಕರಿಪುರ ಗ್ರಾಮದಲ್ಲಿ ಬುಧವಾರ ಜಿಲ್ಲಾಡಳಿತ, ಜಿಲ್ಲಾ ಪಂಚಾಯಿತಿ, ಜಿಲ್ಲಾ ಆಯುಷ್ ಇಲಾಖೆ ಹಾಗೂ ಜಾನ್ ಮೈನ್ಸ್ ಸಹಯೋಗದೊಂದಿಗೆ ರಾಷ್ಟ್ರೀಯ ಆಯುಷ್ ಅಭಿಯಾನ, ಆಯುಷ್ಮಾನ್ ಭಾರತ ಯೋಜನೆ ಅಡಿಯಲ್ಲಿ ಹಿರಿಯ ನಾಗರೀಕರ ದಿನದ ಅಂಗವಾಗಿ ಹಿರಿಯ ನಾಗರೀಕರಿಗೆ ಉಚಿತ ಆಯುಷ್ ಆರೋಗ್ಯ ಶಿಬಿರದಲ್ಲಿ ಅವರು ಮಾತನಾಡಿದರು. ಯೋಗ ದಿನಾಚರಣೆಯಲ್ಲಿ ಜಾನ್ ಮೈನ್ಸ್ ನೀಡಿದ ಸಹಕಾರ ಸ್ಮರಿಸಿದ ಅವರು, ಸ್ಥಳೀಯವಾಗಿ ಹೆಚ್ಚಿನ ಆಯುಷ್ ಶಿಬಿರಗಳನ್ನು ಹಮ್ಮಿಕೊಳ್ಳುವುದಾಗಿ ತಿಳಿಸಿದರು.

ಜಾನ್ ಮೈನ್ಸ್ ವ್ಯವಸ್ಥಾಪಕ ಎನ್. ರಣದೀಪ್ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿ, ಆಯುರ್ವೇದವು ಉತ್ಕೃಷ್ಟ ಚಿಕಿತ್ಸಾ ಪದ್ಧತಿಯಾಗಿದ್ದು, ನಮ್ಮ ಜಾನ್ ಮೈನ್ಸ್ ಜಾಗದಲ್ಲಿ ಇನ್ನೂ ಹೆಚ್ಚು ಹೆಚ್ಚು ಆಯುಷ್ ಶಿಬಿರಗಳನ್ನು ಆಯೋಜಿಸುವಂತೆ ಕೋರಿದರು.



ಅತಿಥಿಗಳಾಗಿ ಭಾಗವಹಿಸಿದ ಸುಭಾಷ್ ಮಾತನಾಡಿ, ಆಯುರ್ವೇದವು ನಮ್ಮ ಭಾರತೀಯ ಪದ್ಧತಿಯಾಗಿದ್ದು, ದೀರ್ಘಕಾಲೀನ ಆರೋಗ್ಯ ಬಯಸುವವರು ಆಯುರ್ವೇದ ಚಿಕಿತ್ಸೆ ಪಡೆಯಬೇಕು ಎಂದು ಕರೆ ನೀಡಿದರು.

ವೈದ್ಯಾಧಿಕಾರಿ ಡಾ.ನಾರದಮುನಿ ಮಾತನಾಡಿ, ಆಯುಷ್ ಆರೋಗ್ಯ ಮಂದಿರಗಳಲ್ಲಿ ಚಿಕಿತ್ಸೆಯೊಂದಿಗೆಪಥ್ಯ,ಆಹಾರಜೀವನಶೈಲಿಯನ್ನು ತಿಳಿ ಹೇಳಲಾಗುವುದು. ಹಿರಿಯ ನಾಗರೀಕರ ಅನುಭವ ನಮ್ಮ ಜೀವನ ಸುಗಮವಾಗಲು ಸಹಕಾರಿ. ಎಲ್ಲರೂ ಈ ಶಿಬಿರದ ಪ್ರಯೋಜನ ಪಡೆಯಬೇಕು ಎಂದು ಕೋರಿದರು.

ಆಯುಷ್ ವೈದ್ಯಾಧಿಕಾರಿ ಡಾ.ಟಿ.ಶಿವಕುಮಾರ್ ಕಾರ್ಯಕ್ರಮ ನಿರೂಪಿಸಿದರು. ಡಾ.ವಿದ್ಯಾ ಎ ಗುನ್ನಗೋಳ ಅವರು ವಂದನಾರ್ಪಣೆ ಸಲ್ಲಿಸಿದರು. ಕಾರ್ಯಕ್ರಮದಲ್ಲಿ ವೈದ್ಯಾಧಿ ಕಾರಿಗಳಾದ ಡಾ.ಪ್ರಾಶಾಂತ್, ಡಾ.ರೇಷ್ಮಾ ಅಲ್ಲಿಸಾಹೇಬ ಮಸೂತಿ, ಯೋಗ ತರಬೇತುದಾರರಾದ ತಿಪ್ಪೇಸ್ವಾಮಿ, ರೂಪಾ ಹಾಗೂ ಆಯುಷ್ ಇಲಾಖೆ ಹಾಗೂ ಜಾನ್ ಮೈನ್ಸ್ ಸಿಬ್ಬಂದಿಯವರು ಹಾಜರಿದ್ದರು.



ಅಹಿಂದ ಸಬಲೀಕರಣ ಸೌಹಾರ್ದ ಸಹಕಾರ ನಿಯಮಿತ ವತಿಯಿಂದ ಪ್ರವಾಸಿ ಮಂದಿರದಲ್ಲಿ ಡಿ.ದೇವರಾಜ ಅರಸುರವರ ಜಯಂತಿ.

## ಕನ್ನಡ ವಿದ್ಯಾರ್ಥಿಗಳು ಸಾಂಸ್ಕೃತಿಕ ರಾಯಭಾರಿಗಳಾಗಿ ರೂಪುಗೊಳ್ಳಿ



» **ಹೊಸದುರ್ಗ**

ನಿಮ್ಮ ಒಳ್ಳೆಯ ಆಲೋಚನೆಗಳು ಉತ್ತಮ ಜೀವನವನ್ನು ರೂಪಿಸುತ್ತವೆಯೇ ಹೊರತು, ಬರೀ ಪಠ್ಯಗಳು ಮತ್ತು ಯಾರೋ ಮಾತುಗಳಿಂದ ಸಾಧ್ಯವಿಲ್ಲ. ನೀವು ಹೇಗೆ ಇದ್ದೀರೋ, ಹಾಗೆ ನಿಮ್ಮನ್ನು ನೀವು ಪ್ರೀತಿಸಿಕೊಳ್ಳಿ. ಒಳ್ಳೆಕೆಗಾಗಿ ಪ್ರಯತ್ನ ಪಡಬೇಡಿ. ಇಲ್ಲಿ ಜಗತ್ತನ್ನು ಮೆಚ್ಚಿಸಲಿಕ್ಕೆ ಯಾರಿಂದಲೂ ಸಾಧ್ಯವಿಲ್ಲ. ಜಗತ್ತು ಕನ್ನಡಿ ಇದ್ದಂತೆ. ನಾವು ಹೇಗೆ ಇರುತ್ತೇವೆಯೋ, ಜಗತ್ತು ಕೂಡ ಹಾಗೆಯೇ ಇರುತ್ತದೆ. ಒಳ್ಳೆಯ ಸುಸಂಬದ್ಧ ಜೀವನವನ್ನು ಸಾಗಿಸಿ, ಸಾಂಸ್ಕೃತಿಕ ರಾಯಭಾರಿಗಳಾಗಿ ರೂಪುಗೊಳ್ಳಿ ಎಂದು ವಿದ್ಯಾರ್ಥಿಗಳಿಗೆ ಚಿತ್ರಹಳ್ಳಿ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನ ಪ್ರಾಚಾರ್ಯ ಡಾ.ಎ.ಮೋಹನ್ ಸಲಹೆ ನೀಡಿದರು. ಪಟ್ಟಣದ ಸರ್ಕಾರಿ ಪ್ರಥಮ ದರ್ಜೆ ಕಾಲೇಜು ಸ್ನಾತಕೋತ್ತರ ಕನ್ನಡ ವಿಭಾಗದಲ್ಲಿ ಬುಧವಾರ ಪ್ರಥಮ ಎಂ.ಎ ವಿದ್ಯಾರ್ಥಿಗಳಿಂದ ದ್ವಿತೀಯ ಎಂ.ಎ ವಿದ್ಯಾರ್ಥಿಗಳಿಗೆ ಆಯೋಜಿಸಿದ್ದ ಹೆಜ್ಜೆ ಗುರುತು ಮತ್ತು ಬೀಳ್ಕೊಡಿಗೆ ಸಮಾರಂಭದಲ್ಲಿ ಮುಖ್ಯ ಅತಿಥಿಯಾಗಿ ಭಾಗವಹಿಸಿ, ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡಿದರು.

ನಿಮ್ಮ ಜೀವನದಲ್ಲಿ ಯಾವ ಅದ್ಭುತಗಳು ಇಲ್ಲ. ನೀವೇ ಒಂದು ಅದ್ಭುತ. ನಿಮ್ಮನ್ನು ಕಾಪಾಡಿಕೊಳ್ಳುವವರು ನೀವೇ ಆಗಿದ್ದೀರಿ. ಬದಲಾದ ಪರಿಸ್ಥಿತಿಯಲ್ಲಿ ಸಂದರ್ಭಕ್ಕೆ ಅನುಸಾರವಾಗಿ ನಿಮ್ಮ ವ್ಯಕ್ತಿತ್ವವನ್ನು ಬದಲಾಯಿಸಿಕೊಳ್ಳಿ. ನಿಮ್ಮನ್ನು ಉದ್ದಾರ ಮಾಡಲು ಇಲ್ಲಿ ಯಾರೂ ಬರುವುದಿಲ್ಲ. ನಿಮ್ಮ ಭವಿಷ್ಯದ ನಿರ್ಧಾರ ನಿಮ್ಮ ಕೈಯಲ್ಲಿದೆ. ಬರೀ ಪಠ್ಯದ ಮೂಲಕವೇ ಕಲಿಕೆ ಸಾಧ್ಯವಿಲ್ಲ. ಅನುಭವಗಳ ಮೂಲಕ ಕಲಿಕೆ ಉಂಟಾಗುತ್ತದೆ. ಅನುಭವಗಳೇ ಬದುಕಿನ ಜೀವಾಳ. ನಿಮ್ಮ ಆಲೋಚನೆಗಳಂತೆಯೇ ಬದುಕು ರೂಪುಗೊಳ್ಳುತ್ತದೆ. ಜಗತ್ತು ಬಹಳ ವಿಶಾಲವಾಗಿದ್ದು, ನಿಮ್ಮ ಬದುಕಿನ ಉದ್ದಾರ ನಿಮ್ಮಲ್ಲಿಯೇ ಇದೆ ಎಂದು ಹೇಳಿದರು. ಈ ವೇಳೆ ಕಾರ್ಯಕ್ರಮದಲ್ಲಿ ಪ್ರಾಸ್ತಾವಿಕವಾಗಿ ಕನ್ನಡ ಸ್ನಾತಕೋತ್ತರ ವಿಭಾಗದ ಮುಖ್ಯಸ್ಥ ಧನಂಜಯ್ ಮಾತನಾಡಿದರು. ಕಾಲೇಜು ಪ್ರಾಚಾರ್ಯರಾದ ಭ್ರಮರಂಬ ಅಧ್ಯಕ್ಷತೆವಹಿಸಿದ್ದರು. ಗ್ರಂಥಪಾಲಕ ದಯಾಗುಣೇಶ್, ಉಪನ್ಯಾಸಕರಾದ ಶೈಲೇಂದ್ರ, ಮಂಜಪ್ಪ, ಎಂ.ಟಿ.ಮಂಜುನಾಥ್, ಗೋವಿಂದರಾಜು, ಜಕಣಚಾರಿ ಮತ್ತು ಬಸವರಾಜ್ ಸೇರಿದಂತೆ ದ್ವಿತೀಯ ಮತ್ತು ಪ್ರಥಮ ಎಂ.ಎ ವಿದ್ಯಾರ್ಥಿಗಳಿದ್ದರು.

## ಪ್ರಮುಖ ಸುದ್ದಿ

### ಮಹಾತ್ಮ ಗಾಂಧೀಜಿ 155ನೇ ಜಯಂತಿ

# ರಾಜ್ಯಮಟ್ಟದ ಬಾಪೂಜಿ ಪ್ರಬಂಧ ಸ್ಪರ್ಧೆ

» **ಚಿತ್ರದುರ್ಗ**

ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯ ವತಿಯಿಂದ ಆಚರಿಸುತ್ತಿರುವ ರಾಷ್ಟ್ರಪಿತ ಮಹಾತ್ಮ ಗಾಂಧೀಜಿಯವರ 155ನೇ ಜಯಂತಿ ದಿನಾಚರಣೆಯ ಅಂಗವಾಗಿ ವಿದ್ಯಾರ್ಥಿ ಹಾಗೂ ಯುವಜನರಲ್ಲಿ ಮಹಾತ್ಮ ಗಾಂಧೀಜಿಯವರ ಬದುಕು, ಸ್ವಾತಂತ್ರ್ಯ ಚಳುವಳಿ, ಸರಳತೆ, ಅಹಿಂಸಾ ಮಾರ್ಗ, ಅಸ್ಪೃಶ್ಯತೆ ನಿವಾರಣೆಗಾಗಿ ನಡೆಸಿದ ಪ್ರಯೋಗಗಳು ಇತ್ಯಾದಿ ವಿಚಾರಗಳ ಬಗ್ಗೆ ಪ್ರೌಢಶಾಲೆ, ಪದವಿ ಪೂರ್ವ ಹಾಗೂ ಪದವಿ / ಸ್ನಾತಕೋತ್ತರ ವಿದ್ಯಾರ್ಥಿಗಳಿಗೆ ಬಾಪೂಜಿ ಪ್ರಬಂಧ ಸ್ಪರ್ಧೆಯನ್ನು ಜಿಲ್ಲಾ ಮತ್ತು ರಾಜ್ಯ ಮಟ್ಟದಲ್ಲಿ ಹಮ್ಮಿಕೊಳ್ಳಲಾಗುತ್ತಿದೆ.

ವಿವಿಧ ವಿಷಯಗಳ ಕುರಿತು ಪ್ರೌಢಶಾಲೆ, ಪದವಿ ಪೂರ್ವ ಶಿಕ್ಷಣ ಹಾಗೂ ಪದವಿ–ಸ್ನಾತಕೋತ್ತರ ಪದವಿಗಳ ಹಂತದ ವಿದ್ಯಾರ್ಥಿಗಳಿಗೆ ಒಟ್ಟು 3 ವಿಭಾಗಗಳಲ್ಲಿ ಬಾಪೂಜಿ ಪ್ರಬಂಧ ಸ್ಪರ್ಧೆಯನ್ನು ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯಿಂದ ಆಯೋಜಿಸಲು ಉದ್ದೇಶಿಸಲಾಗಿದೆ. ವಿಜೇತರಿಗೆ ರಾಜ್ಯಮಟ್ಟದಲ್ಲಿ ಪ್ರಥಮ 31 ಸಾವಿರ ರೂ., ದ್ವಿತೀಯ 21 ಸಾವಿರ ರೂ. ಮತ್ತು ತೃತೀಯ 11 ಸಾವಿರ ರೂ. ಹಾಗೂ ಜಿಲಾ ್ಲಮಟ್ಟದಲ್ಲಿ ಪ್ರಥಮ 03 ಸಾವಿರ ರೂ., ದ್ವಿತೀಯ 02 ಸಾವಿರ ರೂ ಮತ್ತು ತೃತೀಯ 01 ಸಾವಿರ ರೂ. ಬಹುಮಾನ ನೀಡಲಾಗುವುದು.

**ಪ್ರೌಢ ಶಾಲಾ ವಿಭಾಗ** :– 1) ಮಹಾತ್ಮ ಗಾಂಧೀಜಿ ಹಾಗೂ ಪ್ರಜಾಪ್ರಭುತ್ವ, 2) ಗಾಂಧೀಜಿಯವರ ವಿಚಾರದಲ್ಲಿ ಸತ್ಯಾಗ್ರಹ, 3) ನನ್ನ ಬದುಕಿನಲ್ಲಿ ಗಾಂಧೀಜಿ ತತ್ವಗಳನ್ನು ಅಳವಡಿಸಿಕೊಳ್ಳುವ ಬಗೆ, 4) ಗಾಂಧೀಜಿಯವರ ತತ್ವಗಳಿಂದ ದೇಶ ಕಟ್ಟುವ ಬಗೆ, ಪ್ರೌಢಶಾಲಾ ವಿಭಾಗದ ವಿದ್ಯಾರ್ಥಿಗಳು ಈ ನಾಲ್ಕು ವಿಷಯಗಳಲ್ಲಿ ಯಾವುದಾದರೂ ಒಂದು ವಿಷಯ ಕುರಿತು ಸುಮಾರು 900 ಪದಗಳಿಗೆ ಮೀರದಂತೆ ಪ್ರಬಂಧ ಬರೆಯಬೇಕು.

**ಪದವಿ ಪೂರ್ವ ಶಿಕ್ಷಣ ವಿಭಾಗ** :– 1) ಮಹಾತ್ಮ ಗಾಂಧೀಜಿ ಹಾಗೂ ಪ್ರಜಾಪ್ರಭುತ್ವ, 2) ದೇಶದ ಕಳಂಕವಾದ ಅಸ್ಪೃಶ್ಯತೆ ನಿವಾರಿಸುವಲ್ಲಿನ ಗಾಂಧೀಜಿಯವರ ಪ್ರಯೋಗಗಳು, 3) ಗಾಂಧೀಜಿಯವರನ್ನು ಜಗತ್ತು ಗ್ರಹಿಸಿದ ರೀತಿ, 4) ನನ್ನ ಬದುಕಿನಲ್ಲಿ ಗಾಂಧೀಜಿ ತತ್ವಗಳನ್ನು ಅಳವಡಿಸಿಕೊಳ್ಳುವ ಬಗೆ, ಪದವಿ ಪೂರ್ವ ಶಿಕ್ಷಣ ವಿಭಾಗದ ವಿದ್ಯಾರ್ಥಿಗಳು ಈ ನಾಲ್ಕು ವಿಷಯಗಳಲ್ಲಿ ಯಾವುದಾದರೂ ಒಂದು ವಿಷಯ ಕುರಿತು ಸುಮಾರು 1500 ಪದಗಳಿಗೆ ಮೀರದಂತೆ ಪ್ರಬಂಧ ಬರೆಯಬೇಕು.



**ಪದವಿ ಹಾಗೂ ಸ್ನಾತಕೋತ್ತರ ಪದವಿ ವಿಭಾಗ** :– 1) ಇಂದಿನ ಪ್ರಜಾಪ್ರಭುತ್ವದಲ್ಲಿ ಸತ್ಯಾಗ್ರಹದ ಮಹತ್ವ, 2) ದೇಶ ನಿರ್ಮಾಣದಲ್ಲಿ ಗಾಂಧೀಜಿಯವರ ಜಾತ್ಯಾತೀತ ನಿಲುವುಗಳು, 3) ಗಾಂಧೀಜಿಯವರ ಧಾರ್ಮಿಕ ಸಹಿಷ್ಣುತೆ ಚಿಂತನೆ, ಸ್ವಾತಂತ್ರ್ಯ ಮತ್ತು ಸಮಾನತೆಯ ಪರಿಕಲ್ಪನೆಗಳು, 4) ಗಾಂಧೀಜಿಯವರ ವಿಚಾರದಲ್ಲಿ ಸತ್ಯದ ಪರಿಕಲ್ಪನೆ, 5) ಗಾಂಧೀಜಿಯವರು ಕಂಡ ಸ್ವರಾಜ್ಯ ಮತ್ತು ಆರ್ಥಿಕ ಚಿಂತನೆಗಳು. ಪದವಿ ಹಾಗೂ ಸ್ನಾತಕೋತ್ತರ ಪದವಿ ವಿಭಾಗದ ವಿದ್ಯಾರ್ಥಿಗಳು ಈ ಐದು ವಿಷಯಗಳಲ್ಲಿ ಯಾವುದಾದರೂ ಒಂದು ವಿಷಯ ಕುರಿತು ಸುಮಾರು 2000 ಪದಗಳಿಗೆ ಮೀರದಂತೆ ಪ್ರಬಂಧ ಬರೆಯಬೇಕು. ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯು ಜಿಲ್ಲಾಡಳಿತದ ಸಹಯೋಗದೊಂದಿಗೆ ಸ್ಪರ್ಧೆ ಏರ್ಪಡಿಸಿ, ವಿಜೇತರ ವಿವರಗಳು ಹಾಗೂ ಪ್ರಬಂಧಗಳನ್ನು ಕೇಂದ್ರ ಕಚೇರಿಗೆ ಕಳುಹಿಸಲಿದೆ. ಜಿಲ್ಲಾಮಟ್ಟದ ಪ್ರಥಮ ಬಹುಮಾನ ವಿಜೇತ ಪ್ರಬಂಧಗಳನ್ನು ರಾಜ್ಯ ಮಟ್ಟದಲ್ಲಿ ಮರುಮೌಲ್ಯಮಾಪನ ಮಾಡಿ, ರಾಜ್ಯ ಮಟ್ಟದ ಫಲಿತಾಂಶ ಘೋಷಿಸಲಾಗುವುದು. ಪ್ರತಿ ವಿಭಾಗದಲ್ಲಿನ ಅತ್ಯುತ್ತಮವಾದ ಮೂರು (3) ಪ್ರಬಂಧಗಳಿಗೆ ಅಕ್ಟೋಬರ್ 02 ರಂದು ಜಿಲ್ಲಾ ಮಟ್ಟದ ಗಾಂಧೀ ಜಯಂತಿ ದಿನಾಚರಣೆ ಸಂದರ್ಭದಲ್ಲಿ ಬಹುಮಾನ ನೀಡಿ ಪ್ರಬಂಧ ರಚನೆಕಾರರಿಗೆ ಗೌರವಿಸಲಾಗುವುದು.

**ನಿಬಂಧನೆಗಳು**:– ಪ್ರಬಂಧವು ಸಂಪೂರ್ಣವಾಗಿ ಸ್ವರಚಿತವಾಗಿರಬೇಕು. ಸ್ಪರ್ಧೆ ಏರ್ಪಡಿಸುವ ಸ್ಥಳದಲ್ಲಿಯೇ ಶುದ್ಧ ಕೈಬರಹದಲ್ಲಿ ಪ್ರಬಂಧ ಬರೆಯಬೇಕು. ಆಕರವಾಗಿ ಬಳಸಿದ ಪರಾಮರ್ಶನ / ಆಧಾರ ಗ್ರಂಥಗಳ ವಿವರಗಳನ್ನು ಪ್ರಬಂಧದ ಕೊನೆಯಲ್ಲಿ ನಮೂದಿಸಬೇಕು. ಆದರೆ, ಸ್ಪರ್ಧೆ ಏರ್ಪಡಿಸುವ ಸ್ಥಳದಲ್ಲಿ ಪರಾಮರ್ಶನ / ಆಧಾರ ಗ್ರಂಥಗಳು / ಮೊಬೈಲ್‌ಗಳ ಬಳಕೆಗೆ ಅವಕಾಶವಿರುವುದಿಲ್ಲ. ಪ್ರಬಂಧಕಾರರ ಹೆಸರು, ವಿಳಾಸ ನಮೂದಿಸಿರಬೇಕು. ಪ್ರಬಂಧವು ಈ ಮೊದಲು ಎಲ್ಲಿಯೂ ಪ್ರಕಟವಾಗಿರಬಾರದು. ಆಯ್ದ ಪ್ರಬಂಧಗಳ ಪ್ರಕಟಣೆಯ ಹಕ್ಕನ್ನು ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ ಹೊಂದಿರುತ್ತದೆ ತಿಳಿಸಿದೆ.

# ಹೊಳಲ್ಕೆರೆ ಪಟ್ಟಣದ ಹತ್ತನೇ ತರಗತಿ ಆರು ವಿದ್ಯಾರ್ಥಿಗಳು ವಸತಿ ನಿಲಯದಿಂದ ನಾಪತ್ತೆ

» **ಹೊಳಲ್ಕೆರೆ**

ಪಟ್ಟಣದ ವಸತಿ ಶಾಲೆಯಲ್ಲಿ ಹತ್ತನೆ ತರಗತಿ ಅಧ್ಯಯನ ಮಾಡುತ್ತಿದ್ದ 6 ವಿದ್ಯಾರ್ಥಿಗಳು ವಸತಿ ನಿಲಯದಿಂದ ನಾಪತ್ತೆಯಾಗಿರುವ ಘಟನೆ ಬುಧವಾರ ಬೆಳಿಗ್ಗೆ ಬೆಳಕಿಗೆ ಬಂದಿದ್ದು, ಸಂಜೆ ವೇಳೆಗೆ ಪ್ರಕರಣ ಸುಖಾಂತ್ಯ ಕಂಡಿದ್ದು, ಎಲ್ಲಾ ಅರು ವಿದ್ಯಾರ್ಥಿಗಳು ಬೆಂಗಳೂರಿನಲ್ಲಿ ಪತ್ತೆಯಾಗಿದ್ದಾರೆ.

ಪಟ್ಟಣದ ಶಿವಮೊಗ್ಗ ರಸ್ತೆಯಲ್ಲಿರುವ ಕುಕ್ಕಡೇಶ್ವರಿ ದೇವಸ್ಥಾನದ ಮುಂದಿನ ಡ್ರೀಮ್ ವರ್ಲ್ಡ್ ಶಾಸಗಿ ವಸತಿ ಶಾಲೆಯಲ್ಲಿ ಅಧ್ಯಯನ ಮಾಡುತ್ತಿದ್ದ ಹತ್ತನೆ ತರಗತಿ ವಿದ್ಯಾರ್ಥಿಗಳೂ ಅಗಸ್ಟ್ 21 ರಂದು ಮುಂಜಾನೆ ಇದ್ದಕ್ಕಿಂದ್ದಂತೆ ಶಾಲೆ ಕಾಪೌಂಡ್ ದಾಟಿ ಹೊರಟಿದ್ದ 9 ವಿದ್ಯಾರ್ಥಿಗಳಲ್ಲಿ ಮೂವರು ವಾಪಾಸಾಗಿ, 6 ವಿದ್ಯಾರ್ಥಿಗಳು ನಾಪತ್ತೆಯಾಗಿ ತಾಲೂಕಿನಲ್ಲಿ ಅಂತಕ ಸೃಷ್ಟಿಸಿದ್ದರು.

ಶಾಲೆಯಿಂದ ಅರು ವಿದ್ಯಾರ್ಥಿಗಳು ದೀಡಿರ್ ನಾಪತ್ತೆ ಪ್ರಕರಣ ತಾಲೂಕಿನಲ್ಲಿ ಮಿಂಚಿನ ಸಂಚಾರ ಮೂಡಿಸಿದ್ದು, ಸ್ಥಳಕ್ಕೆ ಪೋಲಿಸ್ ಪಡೆ ಅಗಮಿಸಿ ಸಮಗ್ರ ತನಿಖೆ ಕೈಗೊಂಡಿತ್ತು.



ಇನ್ನು ಪೋಷಕರು ಶಾಲೆಗೆ ಆಗಮಿಸಿ ಆಡಳಿತ ಮಂಡಳಿ ವಿರುದ್ದ ಆಕ್ರೋಶ ವ್ಯಕ್ತಪಡಿಸಿ ಅತಂಕದ ಮಧ್ಯ ದಿನ ದೂಡುವಂತಾಗಿತ್ತು.

ನಾಪತ್ತೆಯಾಗಿದ್ದ ವಿದ್ಯಾರ್ಥಿಗಳಾದ ಶ್ರೇಯಸ್ ಎಮ್ಮಿಗನೂರು, ಧನುಷ್ ಎಂ.ಡಿ., ನಂದನಹೋಸೂರು, ಮನು ಜೆ.ವಿ. ಕಸವನಹಳ್ಳಿ, ಆರ್.ತರುಣ್ ಹಾಲೇನಹಳ್ಳಿ, ಸಿದ್ದೇಶ್ ಸಂಗೇನಹಳ್ಳಿ, ಯಶಸ್ ಪಾಡಿಗಟ್ಟೆ ಎನ್ನಲಾಗಿದೆ.

ನಾಪತ್ತೆಯಾಗಿದ್ದ ಎಮ್ಮಿಗನೂರು ಶ್ರೇಯಸ್ ಜತೆ ಎಲ್ಲಾರು ಬೆಂಗಳೂರಿನಲ್ಲಿರುವ ಶ್ರೇಯಸ್ ಅತ್ತೆ ಶ್ವೇತಾ ಮನೆಯಲ್ಲಿ ಪತ್ತೆಯಾಗಿ ಪೋಲಿಸ್ ಮತ್ತು ತಹಸೀಲ್ದಾರ್ ವಿದ್ಯಾರ್ಥಿಗಳ ಜತೆ ದೂರವಾಣಿ ಮೂಲಕ ಮಾತನಾಡಿದ್ದಾರೆ.

ಶಾಲೆ ಆಡಳಿತ ಮಂಡಳಿ ವಿರುದ್ದ ಆಕ್ರೋಶ ವ್ಯಕ್ತಪಡಿಸಿದ ಪೋಷಕರು, ಸಾಕಷ್ಟು ಶುಲ್ಕ ಪಡೆದು ವಸತಿಯುತ್ತ ಶಾಲೆಯಲ್ಲಿ ವಿದ್ಯಾರ್ಥಿಗಳಿಗೆ ಸಮರ್ಪಕ ಸೌಲಭ್ಯ ಕಲ್ಪಿಸಿಲ್ಲ. ಸಿಸಿ ಕ್ಯಾಮರ್ ಇವೆ. ಅವುಗಳಿಗೆ ವೈರ ಸಂಪರ್ಕ ಇಲ್ಲ. ವಸತಿ ನಿಲಯದಲ್ಲಿ ಗುಣಮಟ್ಟದ ಆಹಾರದ ನೀಡುತ್ತಿಲ್ಲ. ವಿದ್ಯಾರ್ಥಿಗಳಿಗೆ ಕಿರುಕುಳ ಹೆಚ್ಚಾಗಿ ಪೋಷಕರಿಗೆ ಹೇಳಿಕೊಳ್ಳಲು ಸಾಧ್ಯವಾಗದೆ ವಿದ್ಯಾರ್ಥಿಗಳು ಮಾನಸಿಕ ಒತ್ತಡಕ್ಕೆ ಸಿಲುಕಿ ನಿಲಯ ಬಿಟ್ಟು ಹೊಗಿದ್ದಾರೆಂದು ಅತಂಕ ವ್ಯಕ್ತಪಡಿಸಿದರು.

> ಶಾಲೆ ಅಡಳಿತ ಮಂಡಳಿ ಸರಕಾರದ ಪರವಾನಿಗೆ ಇಲ್ಲದೆ ಅನಾಧಿಕೃತವಾಗಿ ಹಾಸ್ಟಲ್ ನಡೆಸುತ್ತದೆ. ಹಾಸ್ಟಲ್ ವಿದ್ಯಾರ್ಥಿಗಳಿಗೆ ಹೆಚ್ಚಿನ ಅಧ್ಯಾಯನಕ್ಕೆ ನಿತ್ಯ ನೀಡುತ್ತಿದ್ದ ಕಿರುಕುಳಕ್ಕೆ ಬೇಸತ್ತ ವಿದ್ಯಾರ್ಥಿಗಳು ಒತ್ತಡ ಸಹಿಸಿಕೊಳ್ಳಲು ಸಾಧ್ಯವಿಲ್ಲದೆ ರಾತ್ರೋರಾತ್ರಿ ಹಾಸ್ಟಲ್ ತೊರೆದಿದ್ದಾರೆ. ವಿದ್ಯಾರ್ಥಿಗಳು ಸುರಕ್ಷಿತವಾಗಿದ್ದಾರೆ. ಹಾಸ್ಟಲ್‌ನಲ್ಲಿ ಇರಲು ವಿದ್ಯಾರ್ಥಿಗಳು ಒಪ್ಪುತ್ತಿಲ್ಲ. ನಾನು ವಿಡೀಯೋ ಕಾಲ್ ನಲ್ಲಿ ಮಾತನಾಡಿದ್ದೇನೆ.
>
> » **ತಹಸೀಲ್ದಾರ್ ಬೀಬಿ ಫಾತೀಮಾ.**

## ಫಾಸ್ಟ್ ನ್ಯೂಸ್

### ರಾಯರ 353ನೇ ಆರಾಧನಾ ಮಹೋತ್ಸವ



» **ಚಿತ್ರದುರ್ಗ**

ರಾಯರ 353ನೇ ಆರಾಧನಾ ಮಹೋತ್ಸವ ಸಂಭ್ರಮ ಮನೆ ಮಾಡಿದೆ. ನಗರದ ಆನೆ ಬಾಗಿಲ ಬಳಿಯಲ್ಲಿನ ಜಗದ್ಗುರು ಶ್ರೀಮನ್ ಮಧ್ವಾಚಾರ್ಯ ಮೂಲ ಮಹಾ ಸಂಸ್ಥಾನ ನಂಜನಗೂಡು ಶ್ರೀ ರಘವೇಂದ್ರ ಸ್ವಾಮಿಗಳವರ ಬೃಂದಾವನ ಸನ್ನಿಧಾನದ ರಾಯರ ಮಠದಲ್ಲಿ ಮಧ್ಯಾರಾಧನೆ ಜನರ ಭಕ್ತಿ ಭಾವಕ್ಕೆ ಪರಾವಶವಾಗಿದೆ. ಅಧಿಕ ಸಂಖ್ಯೆಯಲ್ಲಿ ಭಕ್ತಾಧಿಗಳು ಮಠಕ್ಕೆ ಆಗಮಿಸಿ ರಾಯದ ದರ್ಶನ ಪಡೆದರು. ರಾಯರ ಮಂತ್ರಾಲಯದಲ್ಲಿ ದೇವರ ಧ್ಯಾನದಲ್ಲಿರುವ ರಾಯರ ಕಣ್ಣು ಭಕ್ತರ ಕಡೆ ದೃಷ್ಟಿ ಹಾಯಿಸಿದ್ದು, ಹೀಗಾಗಿ ಅಧಿಕ ಸಂಖ್ಯೆಯಲ್ಲಿ ಇಂದು ಭಕ್ತರು ಸೇರ್ಪಡೆಯಾಗಲಿದ್ದಾರೆ. ಅದರಂತೆ ಜನರು ಹೆಚ್ಚಿನ ಸಂಖ್ಯೆಯಲ್ಲಿ ಆಗಮಿಸಿ ರಾಯರ ಕೃಪಾಕಟಾಕ್ಷಕ್ಕೆ ಒಳಗಾಗಿದ್ದಾರೆ. ರಾಯರಿಗೆ ವಿಶೇಷ ಅಲಂಕಾರ ಮಾಡಲಾಗಿದೆ. ರಾಯರು ಜೀವಂತವಾಗಿ ವೃಂದಾವನ ಪ್ರವೇಶವಾದ ದಿನವೇ ಮಧ್ಯಾರಾಧನೆ ಆಗಿದೆ. ಮಧ್ಯಾರಾಧನೆ ಪ್ರಯುಕ್ತ ವಿಶೇಷ ಪೂಜಾ ಕೈಂಕರ್ಯಗಳ ಜೊತೆ ಉತ್ಸವಗಳು ಶ್ರೀ ಮಠದಲ್ಲಿ ನಡೆದವು ಇವತ್ತು ಮಂತ್ರಾಲಯದ ರಾಯರ ಮಠದಲ್ಲಿ ಮಧ್ಯಾರಾಧನೆ ನಡೆದಿದ್ದು, ರಾಯರ ಆರಾಧನಾ ಮಹೋತ್ಸವದಲ್ಲಿ ಪೂರ್ವಾರಾಧನೆ, ಮಧ್ಯಾರಾಧನೆ ಹಾಗೂ ಉತ್ತರಾಧನೆ ಈ ಮೂರು ದಿನಗಳು ಅತಿ ಮಹತ್ವವಾಗಿವೆ.ಆ. 22ನೇ ಗುರುವಾರ : ಶ್ರೀ ಗುರುಸಾರ್ವಭೌಮರ ಉತ್ತರಾರಾಧನೆ ಪ್ರಾತ: 10.00 ಗಂಟೆಗೆ ಶ್ರೀ ಗುರುಸಾರ್ವಭೌಮರ ಉತ್ತರಾರಾಧನೆ ಪ್ರಯುಕ್ತ ಮಹಾರಥೋತ್ಸವವು ಚಿತ್ರದುರ್ಗದ ರಾಜಬೀದಿಗಳಲ್ಲಿ ವಿವಿಧ ಭಜನಾಮಂಡಳಿಗಳು ಹಾಗೂ ಶ್ರೀ ಗುರುಸಾರ್ವಭೌಮರ ಭಕ್ತರೊಂದಿಗೆ ಜರುಗುವುದು. ಆ 23 ನೇ ಶುಕ್ರವಾರ : ಶ್ರೀ ಸುಜ್ಞಾನೇಂದ್ರತೀರ್ಥರ ಆರಾಧನೆ, ಪವಮಾನ ಹೋಮ, ಸರ್ವಸಮರ್ಪಣೋತ್ಸವ ಕಾರ್ಯಕ್ರಮ ನಡೆಯಲಿದೆ.ಬೆಳಿಗ್ಗೆ ನಿರ್ಮಾಲ್ಯ ಅಷ್ಟೋತ್ತರ ಸಹಿತ ಫಲಪಂಚಾಮೃತ ಅಭಿಷೇಕ ಉತ್ಸವರಾಯರ ಪಾದಪೂಜೆ, ಕನಕಾಭಿಷೇಕ ನೈವೇದ್ಯ, ಅಲಂಕಾರ ಪಂಕ್ತಿ, ಹಸ್ತೋದಕ, ಮಹಾಮಂಗಳಾರತಿ, ತೀರ್ಥಪ್ರಸಾದ ಭಜನಾ ಕಾರ್ಯಕ್ರಮ ಸಾಂಸ್ಕೃತಿಕ ಕಾರ್ಯಕ್ರಮ ರಜತ ರಥೋತ್ಸವ, ಸ್ವಸ್ತಿವಾಚನ, ಅಷ್ಟಾವಧಾನ, ಮಹಾ ಮಂಗಳಾರತಿ. ಕಾರ್ಯಕ್ರಮ ನಡೆಯಿತು. ಬೆಳ್ಗಿಗೆ ಶ್ರೀ ಸಪ್ತಗಿರಿ ಭಜನಾ ಮಂಡಳಿಯವರಿಂದ ಭಜನೆ ಸಂಜೆ ಸುಜೀತ್ ಕುಲಕರ್ಣಿ ಇವರಿಂದ ದಾಸವಾಣಿ ಕಾರ್ಯಕ್ರಮ ನಡೆಯಿತು.

### ಮುಂದುವರೆದ ಮಳೆ ಮತ್ತೆರಡು ಮನೆ ನೆಲಸಮ

» **ಹೊಸದುರ್ಗ**

ಮಂಗಳವಾರ ಮತ್ತು ಬುಧವಾರ ಮುಂಜಾನೆ ಸುರಿದ ಮಳೆಗೆ ತಾಲೂಕಿನಲ್ಲಿ ವಾಸದ ಎರಡು ಮನೆಗಳು ಸಂಪೂರ್ಣವಾಗಿ ನೆಲಸಮವಾಗಿದ್ದು ಮತ್ತೆ ಕೆಲವೆಡೆ ನಾನಾ ಕಡೆಗಳಲ್ಲಿ ಗೋಡೆಗಳು ಕುಸಿದುಹೋಗಿರುವ ಘಟನೆಗಳು ಬೆಳಕಿಗೆ ಬಂದಿದ್ದು ಬುಧವಾರ ಬಂದ ಮಳೆಯು ತಾಲೂಕಿನ ಶ್ರೀರಾಂಪುರ ಹೋಬಳಿಯಲ್ಲಿ 20.0 ಮಿ.ಮೀ ಮಳೆಯಾಗಿರುವ ಬಗ್ಗೆ ವರದಿಯಾಗಿದ್ದು ರಭಸವಾಗಿ ಬಂದ ಮಳೆಯಿಂದ ತಾಲೂಕಿನ ಮತ್ತೋಡು ಹೋಬಳಿಯ ಅಜ್ಜಿಕಂಸಾಗರ ಗ್ರಾಮದ ಹನುಮಕ್ಕ ಕೋಂ ರಮೇಶ ಎಂಬುವವರ ಮನೆಯ ಗೋಡೆ ಸಂಪೂರ್ಣ ಬಿದ್ದ ಪರಿಣಾಮ ಸುಮಾರು 50 ಸಾವಿರ ರೂ ನಷ್ಟವಾಗಿದ್ದರೆ.ಶ್ರೀರಾಂಪುರ ಹೋಬಳಿಯ ಕುರುಬರಹಳ್ಳಿ ಗ್ರಾಮದ ಹನುಮಪ್ಪ ಬಿನ್ ರಾಮಯ್ಯ ಎಂಬುವವರ ಮನೆ ಕುಸಿದು ಬಿದ್ದುದ್ದು ಎಲ್ಲಿಯೂ ಕೂಡ ಪ್ರಾಣ ಹಾನಿಯಾಗಿರುವುದಿಲ್ಲ ಎಂದು ತಹಶಿಲ್ದಾರ್ ಅವರ ಕಛೇರಿಯ ವರದಿ ತಿಳಿಸಿದೆ. ಮಳೆಯ ಪ್ರಮಾಣ: ಶ್ರೀರಾಂಪುರಕ್ಕೆ 20.0 ಮಿ.ಮೀ, ಬಾಗೂರು 8.5 ಮಿಮೀ, ಹೊಸದುರ್ಗ 5.2 ಮಿ.ಮೀ. ಮತ್ತು ಮಾಡದಕೆರೆ 3.0 ಮಿ.ಮೀ ಮಳೆಯಾಗಿರುವ ಬಗ್ಗೆ ವರದಿಯಾಗಿದೆ.

### ಹೊಸದುರ್ಗ: ರಾಘವೇಂದ್ರ ಸ್ವಾಮಿ ಆರಾಧನೆ

» **ಹೊಸದುರ್ಗ**

ಪಟ್ಟಣದ ಹುಳಿಯಾರು ವೃತ್ತದಲ್ಲಿರುವ ಆಂಜನೇಯ ಸ್ವಾಮಿ ಪೂಜಾ ಮಹೋತ್ಸವ ಹಾಗೂ ರಾಘವೇಂದ್ರ ಸ್ವಾಮಿಗಳ ಆರಾಧನಾ ಮಹೋತ್ಸವ ಕಳೆದ ದಿನಾಂಕ ಆ. 20 ರಿಂದ 22 ರವರೆಗೆ ನಡೆಯಲಿದ್ದು ಆ.21 ರಂದು ಬುಧವಾರ ಮಧ್ಯಾರಾಧನೆ, ಉತ್ತರಾರಾಧನೆ ಅಂಗವಾಗಿ ಅಭಿಷೇಕ ಮಹಾಮಂಗಳಾರತಿ ನಡೆಯಿತು ಅಪಾರ ಸಂಖ್ಯೆಯ ಭಕ್ತರು ಭಾಗವಹಿಸಿ, ದೇವರ ದರ್ಶನ ಪಡೆದರು.

# ಚಿತ್ರದುರ್ಗ ಜಿಲ್ಲೆಯಲ್ಲಿ 18.1 ಮಿ.ಮೀ ಮಳೆ

» **ಚಿತ್ರದುರ್ಗ**

ಮಂಗಳವಾರ ಸುರಿದ ಮಳೆ ವಿವರದನ್ವಯ ಚಿತ್ರದುರ್ಗ ಜಿಲ್ಲೆಯಲ್ಲಿ ಸರಾಸರಿ 18.1 ಮಿ.ಮೀ ಮಳೆಯಾಗಿದೆ.

ಜಿಲ್ಲೆಯ ಚಳ್ಳಕೆರೆ ತಾಲ್ಲೂಕಿನಲ್ಲಿ 34.5 ಮಿ.ಮೀ, ಚಿತ್ರದುರ್ಗ ತಾಲ್ಲೂಕಿನಲ್ಲಿ 22.4 ಹಿರಿಯೂರು ತಾಲ್ಲೂಕು 9.4 ಮಿ.ಮೀ, ಹೊಳಲ್ಕೆರೆ ತಾಲ್ಲೂಕು 8.5 ಮಿ.ಮೀ, ಹೊಸದುರ್ಗ ತಾಲ್ಲೂಕಿನಲ್ಲಿ 6.4 ಹಾಗೂ ಮೊಳಕಾಲ್ಮುರು ತಾಲ್ಲೂಕಿನಲ್ಲಿ 21.6 ಮಿ.ಮೀ ಮಳೆಯಾಗಿದೆ.

**ಹೋಬಳಿವಾರು ಮಳೆ ವಿವರ:** ಚಳ್ಳಕೆರೆ ತಾಲ್ಲೂಕಿನ ಚಳ್ಳಕೆರೆಯಲ್ಲಿ 25.7 ಮಿ.ಮೀ, ನಾಯಕನಹಟ್ಟಿ 44.5 ಮಿ.ಮೀ, ಪರಶುರಾಂಪುರ 19.7 ಮಿ.ಮೀ, ತಳಕು 49.3 ಮಿ.ಮೀ ಮಳೆಯಾಗಿದೆ. ಚಿತ್ರದುರ್ಗ ತಾಲ್ಲೂಕಿನ ಚಿತ್ರದುರ್ಗದಲ್ಲಿ 12.7 ಮಿ.ಮೀ, ಭರಮಸಾಗರ 38.2 ಮಿ.ಮೀ, ಹಿರೇಗುಂಟನೂರು 17.8 ಮಿ.ಮೀ, ತುರುವನೂರು 25.8 ಮಿ.ಮೀ ಮಳೆಯಾಗಿದೆ. ಹಿರಿಯೂರು ತಾಲ್ಲೂಕಿನ ಹಿರಿಯೂರಿನಲ್ಲಿ 5.2 ಮಿ.ಮೀ, ಐಮಂಗಲ 8.8 ಮಿ.ಮೀ, ಧರ್ಮಪುರ 17.1 ಮಿ.ಮೀ, ಜೆ.ಜೆ.



ಹಳ್ಳಿ 5.1 ಮಿ.ಮೀ ಮಳೆಯಾಗಿದೆ. ಹೊಳಲ್ಕೆರೆ ತಾಲ್ಲೂಕಿನ ಹೊಳಲ್ಕೆರೆಯಲ್ಲಿ 9.7 ಮಿ.ಮೀ, ಬಿ.ದುರ್ಗ 6.9 ಮಿ.ಮೀ, ರಾಮಗಿರಿ 14.1 ಮಿ.ಮೀ, ತಾಳ್ಯ 4.5 ಮಿ.ಮೀ ಮಳೆಯಾಗಿದೆ. ಹೊಸದುರ್ಗ ತಾಲ್ಲೂಕಿನ ಹೊಸದುರ್ಗದಲ್ಲಿ 9.1 ಮಿ.ಮೀ, ಮಾಡದಕೆರೆ 1.9 ಮಿ.ಮೀ, ಮತ್ತೋಡು 4.2 ಮಿ.ಮೀ, ಶ್ರೀರಾಂಪುರ 10.5 ಮಿ.ಮೀ ಮಳೆಯಾಗಿದೆ. ಮೊಳಕಾಲ್ಮುರು ತಾಲ್ಲೂಕಿನ ಮೊಳಕಾಲ್ಮೂರಿನಲ್ಲಿ 18.6 ಮಿ.ಮೀ ಹಾಗೂ ದೇವಸಮುದ್ರದಲ್ಲಿ 24.9 ಮಿ.ಮೀ ಮಳೆಯಾಗಿದೆ.

**49 ಮನೆಗಳು ಭಾಗಶಃ ಹಾನಿ:** ಮಂಗಳವಾರ ಸುರಿದ ಮಳೆಗೆ ಜಿಲ್ಲೆಯಾದ್ಯಂತ ಒಟ್ಟು 49 ಮನೆಗಳು ಭಾಗಶಃ ಹಾನಿ, 3 ಮನೆಗಳಿಗೆ ನೀರು ನುಗ್ಗಿರುವ ಪ್ರಕರಣ ವರದಿಯಾಗಿದ್ದು, 8 ಹೆಕ್ಟೇರ್ ತೋಟಗಾರಿಕೆ ಬೆಳೆ, 17 ಹೆಕ್ಟೇರ್ ಕೃಷಿ ಬೆಳೆ ಹಾನಿಯಾಗಿದೆ.

ಚಿತ್ರದುರ್ಗ ತಾಲ್ಲೂಕಿನಲ್ಲಿ 26 ಮನೆಗಳು ಭಾಗಶಃ ಹಾನಿ, ಚಳ್ಳಕೆರೆ ತಾಲ್ಲೂಕಿನಲ್ಲಿ 15 ಮನೆಗಳು ಭಾಗಶಃ ಹಾನಿ ಹಾಗೂ 5 ಹೆಕ್ಟೇರ್ ತೋಟಗಾರಿಕೆ ಬೆಳೆ ಹಾಗೂ 4 ಹೆಕ್ಟೇರ್ ಕೃಷಿ ಬೆಳೆ ಹಾನಿಯಾಗಿದ್ದು, 3 ಮನೆಗಳಿಗೆ ನೀರು ನುಗ್ಗಿರುವ ಪ್ರಕರಣ ವರದಿಯಾಗಿದೆ. ಹೊಸದುರ್ಗ ತಾಲ್ಲೂಕಿನಲ್ಲಿ 2 ಮನೆಗಳು ಭಾಗಶಃ ಹಾನಿಯಾಗಿವೆ. ಹಿರಿಯೂರು ತಾಲ್ಲೂಕಿನಲ್ಲಿ 4 ಮನೆಗಳು ಭಾಗಶಃ ಹಾನಿಯಾಗಿವೆ. ಮೊಳಕಾಲ್ಮುರು ತಾಲ್ಲೂಕಿನಲ್ಲಿ 2 ಮನೆಗಳು ಭಾಗಶಃ ಹಾನಿಯಾಗಿದ್ದು, 13 ಹೆಕ್ಟೇರ್ ಕೃಷಿ ಬೆಳೆ ಹಾಗೂ 3.3 ಹೆಕ್ಟೇರ್ ತೋಟಗಾರಿಕೆ ಬೆಳೆ ಹಾನಿಯಾಗಿದೆ ಎಂದು ಜಿಲ್ಲಾಧಿಕಾರಿಗಳ ಕಚೇರಿ ಪ್ರಕಟಣೆ ತಿಳಿಸಿದೆ.

# ಮಾನಸಿಕ ಅಸ್ವಸ್ಥರನ್ನು ಹುಡುಕಿ ಜಿಲ್ಲಾಸ್ಪತ್ರೆಗೆ ಸೇರಿಸಿ: ಮಂಜುನಾಥ್



» **ಚಿತ್ರದುರ್ಗ**

ಮಾನಸಿಕ ಅಸ್ವಸ್ಥರನ್ನು ಹುಡುಕಿ ಜಿಲ್ಲಾಸ್ಪತ್ರೆಗೆ ಸೇರಿಸಿ ಗುಣಪಡಿಸುವ ಕೆಲಸ ಮಾಡಬೇಕೆಂದು ಮನೋ ವೈದ್ಯರಾದ ಡಾ.ಮಂಜುನಾಥ್ ತಾಲ್ಲೂಕಿನ ಶುಶ್ರೂಷಣಾಧಿಕಾರಿಗಳಿಗೆ ತಿಳಿಸಿದರು.

ಬುದ್ದ ನಗರದ ಆರೋಗ್ಯ ಕೇಂದ್ರದಲ್ಲಿ ತಾಲ್ಲೂಕಿನ ಶುಶ್ರೂಷಣಾಧಿಕಾರಿಗಳಿಗೆ ಏರ್ಪಡಿಸಲಾಗಿದ್ದ ಒಂದು ದಿನದ ಮಾನಸಿಕ ಆರೋಗ್ಯ ಕಾರ್ಯಕ್ರಮದ ಉದ್ಘಾಟಿಸಿ ಮಾತನಾಡಿದರು.

ಇತ್ತೀಚಿನ ದಿನಗಳಲ್ಲಿ ಮನೋರೋಗದ ಕಾಯಿಲೆಯವರನ್ನು ಹುಡುಕಬೇಕಾಗಿಲ್ಲ. ಬೀಡಿ ಸಿಗರೇಟು ಮದ್ಯ ಸೇವನೆ ಅತಿಯಾದ ಮೊಬೈಲ್ ಚಟಗಳಿಗೆ ಬಲಿಯಾಗಿರುವವರು ಮನೋರೋಗಿಗಳೆ ಆಗಿರುತ್ತಾರೆ. ಅಂತಹವರನ್ನು ಪತ್ತೆ ಹಚ್ಚಿ ಆಸ್ಪತ್ರೆಗೆ ಕರೆ ತಂದರೆ ಆಪ್ತ ಸಮಾಲೋಚನೆ ನಡೆಸಿ ಗುಣಪಡಿಸಬಹುದಾಗಿದೆ. ಕಲ್ಪನಾ ಲೋಕದಲ್ಲಿ ಮಾತನಾಡುವವರು ಕೂಡ ಮನೋ ರೋಗಿಗಳಾಗಿರುತ್ತಾರೆ. ಆರೋಗ್ಯ ಸೇವೆಯಲ್ಲಿರುವ ನೀವುಗಳು ಪ್ರಾಮಾಣಿಕವಾಗಿ ಕೆಲಸ ಮಾಡಿ ಮನೋರೋಗಿಗಳನ್ನು ಪತ್ತೆ ಹಚ್ಚಬೇಕಾಗಿದೆ ಎಂದರು.

ಆರೋಗ್ಯ ಮೇಲ್ವಿಚಾರಣಾಧಿಕಾರಿ ಸುರೇಶ್ ಮಾತನಾಡಿ ಸೊಳ್ಳೆಗಳಿಂದ ಹರಡುವ ರೋಗಗಳನ್ನು ನಿಯಂತ್ರಿಸುವ ಕುರಿತು ವಿಶ್ವ ಸೊಳ್ಳೆ ದಿನವಾದ ಇಂದು ಪ್ರತಿಜ್ಞೆ ಮಾಡಬೇಕಾಗಿದೆ. ಟೈರು, ಎಳನೀರು ಚಿಪ್ಪು, ಡ್ರಮ್ ಇನ್ನು ಮುಂತಾದ ಸ್ಥಳಗಳಲ್ಲಿ ಸೊಳ್ಳೆಗಳ ತಾಣವಾಗದಂತೆ ಕಟ್ಟೆಚ್ಚರ ವಹಿಸುವ ಕುರಿತು ಜನಸಾಮಾನ್ಯರಲ್ಲಿ ಜಾಗೃತಿ ಮೂಡಿಸುವುದು ನಿಮ್ಮ ಜವಾಬ್ದಾರಿ ಎಂದರು. ಆರೋಗ್ಯ ನಿರೀಕ್ಷಣಾಧಿಕಾರಿ ಮಲ್ಲಿಕಾರ್ಜುನ್ ಮಾತನಾಡುತ್ತ ಡೆಂಗ್ಯೂ ಜ್ವರ ಎಲ್ಲೆಡೆ ಹರಡುತ್ತಿದೆ. ಸೊಳ್ಳೆಗಳಿಂದ ಕಚ್ಚಿಸಿಕೊಳ್ಳದೆ ಶುದ್ದವಾದ ನೀರು ಕುಡಿಯುವುದು ಮುಖ್ಯ. ಇದಕ್ಕೆ ಸಾರ್ವಜನಿಕರ ಸಹಭಾಗಿತ್ವ ಅಗತ್ಯ ಎಂದು ಹೇಳಿದರು. ಡಾ.ನಾಗರಾಜ್, ಬುದ್ದನಗರ ವೈದ್ಯಾಧಿಕಾರಿ ಸುರೇಂದ್ರಕುಮಾರ್, ಆರೋಗ್ಯ ಮೇಲ್ವಿಚಾರಕ ಸುರೇಶ್, ಮಲ್ಲಿಕಾರ್ಜುನ್, ಶ್ರೀನಿವಾಸಮೂರ್ತಿ, ಗುರುಮೂರ್ತಿ, ವೈ. ತಿಪ್ಪೇಸ್ವಾಮಿ, ಬಿ.ಆರ್.ನಾಗರಾಜ್, ಹೆಚ್.ಎ.ನಾಗರಾಜ್, ಶ್ರೀಧರ್ ಇನ್ನು ಮುಂತಾದವರು ಕಾರ್ಯಕ್ರಮದಲ್ಲಿ ಹಾಜರಿದ್ದರು.

# ಶ್ರೀಕೃಷ್ಣ ಜನ್ಮಾಷ್ಟಮಿ ಪ್ರಯುಕ್ತ ಪೂರ್ವಭಾವಿ ಸಭೆ

» **ಚಿತ್ರದುರ್ಗ**

ಹೊಳಲ್ಕೆರೆ ರಸ್ತೆಯಲ್ಲಿರುವ ಕೃಷ್ಣಯಾದವಾನಂದ ಮಠದ ಸಮೀಪವಿರುವ ಶ್ರೀಕೃಷ್ಣ ವೃತ್ತದಲ್ಲಿ ಆ.26 ರಂದು ಶ್ರೀಕೃಷ್ಣ ಜನ್ಮಾಷ್ಟಮಿ ಆಚರಿಸುವ ಕುರಿತು ತಾಲ್ಲೂಕು ಗೊಲ್ಲ ಸಮಾಜದಿಂದ ಇತ್ತೀಚೆಗೆ ಪ್ರವಾಸಿ ಮಂದಿರದಲ್ಲಿ ಪೂರ್ವಭಾವಿ ಸಭೆಯನ್ನು ಕರೆಯಲಾಗಿತ್ತು.

ಶ್ರೀಕೃಷ್ಣ ಜನ್ಮಾಷ್ಠಮಿ ಆಚರಣಾ ಸಮಿತಿ ಅಧ್ಯಕ್ಷ ಈರಜ್ಜನಹಟ್ಟಿ ಕೆ.ಕದುರಪ್ಪ ಮಾತನಾಡಿ ಶ್ರೀಕೃಷ್ಣ ಜನ್ಮಾಷ್ಟಮಿ ಪ್ರಯುಕ್ತ ಆ.25 ರಂದು ಶ್ರೀಕೃಷ್ಣ ವೃತ್ತದಿಂದ ಬೈಕ್‌ರ್‍ಯಾಲಿ ಹೊರಟು ನಗರದ ಪ್ರಮುಖ ಬೀದಿಗಳಲ್ಲಿ ಸಂಚರಿಸಲಿದೆ. ಆ.26 ರಂದು ಬೆಳಗಿನಿಂದಲೇ ವಿವಿಧ ಪೂಜಾ ಕಾರ್ಯಕ್ರಮಗಳ ನಡೆಯಲಿದ್ದು, ಸಮಸ್ತ ಗೊಲ್ಲ ಜನಾಂಗದವರು ಹಾಗೂ ಸಹೋದರ



ಸಮಾಜದವರು ಹೆಚ್ಚಿನ ಸಂಖ್ಯೆಯಲ್ಲಿ ಆಗಮಿಸಿ ಯಶಸ್ವಿಗೊಳಿಸುವಂತೆ ಮನವಿ ಮಾಡಿದರು.

ಗೊಲ್ಲ ಸಮಾಜದ ಮುಖಂಡ ನಗರಸಭೆ ಮಾಜಿ ಅಧ್ಯಕ್ಷ ಸಿ.ಟಿ.ಕೃಷ್ಣಮೂರ್ತಿ ಮಾತನಾಡಿ ಜನಾಂಗದ ಅನೇಕ ಮುಖಂಡರುಗಳು ಶಾಸಕರು, ಸಂಸದರು ಹಾಗೂ ಜಿಲ್ಲಾಧಿಕಾರಿ ಇವರುಗಳು ಶ್ರೀಕೃಷ್ಣ ಜನ್ಮಾಷ್ಠಮಿಯಲ್ಲಿ ಭಾಗವಹಿಸಲಿದ್ದಾರೆ. ಇದು ಕೇವಲ ಗೊಲ್ಲ ಜನಾಂಗಕ್ಕೆ ಮಾತ್ರ ಸೀಮಿತವಲ್ಲ. ಎಲ್ಲಾ ಜಾತಿ ಧರ್ಮದವರು ಪಾಲ್ಗೊಳ್ಳಬೇಕೆಂದು ವಿನಂತಿಸಿದರು.

## ಪ್ರಮುಖ ಸುದ್ದಿ

# ನೋಡ ಬನ್ನಿ ದೋಡ್ಡಚೆಲ್ಲೂರು ಬಯಾಲಾಂಜಿನೇಯ ಸ್ವಾಮಿ

» **ಮಹದೇವಪುರ ಶಿವಮೂರ್ತಿ.**

ಪರಶುರಾಂಪುರ:ಬೈಲಾಂಜನೇಯು ಸ್ವಾಮಿ ಅಥವಾ ಬಯಲು ಹನುಮಂತರಾಯ, ಬಯಲ ಹನುಮಪ್ಪ ಎಂದೇ ಪ್ರಸಿದ್ಧಿ ಪಡೆದು ಬಯಲು ಸೀಮೆಯ ಜನರ ಜೀವನದ ಬವಣೆ, ಸಮಸ್ಯೆಗಳ ನಿವಾರಣೆಯ ದೈವವಾಗಿ ಜನತೆಯ ಆಶೋತ್ತರಗಳನ್ನು ಈಡೇರಿಸುವ ಸ್ವಾಮಿಯಾಗಿ ನೆಲೆ ನಿಂತಿರುವ ಸ್ವಾಮಿಯೇ ದೊಡ್ಡಚೆಲ್ಲೂರಿನ ಬಯಲಾಂಜಿನೇಯಸ್ವಾಮಿ.

ಇದು ಚಿತ್ರದುರ್ಗ ಜಿಲ್ಲೆಯ ಚಳ್ಳಕೆರೆ ತಾಲ್ಲೂಕಿನ ಪರಶುರಾಂಪುರ ಹೋಬಳಿ ಸಮೀಪದ ಧರ್ಮಪುರ- ಹಿರಿಯೂರು ರಸ್ತೆ ಮಾರ್ಗದಲ್ಲಿ ದೊಡ್ಡಚೆಲ್ಲೂರು ಗ್ರಾಮದ ಬಸ್ ನಿಲ್ದಾಣದಿಂದ ಟಿ.ಎನ್. ಕೋಟೆ ಕಡೆಗೆ ಹೋಗುವ ರಸ್ತೆಯ ಎಡ ಬದಿಯಲ್ಲಿ ಅರ್ಧ ಕಿಮಿ ದೂರದಲ್ಲಿರುವ ಒಂದು ಪ್ರಸಿದ್ಧ ದೇವಾಲಯವೇ ಬಯಲಾಂಜಿನೇಯ ದೇಗುಲ.

ಇದು ಈ ಭಾಗದಲ್ಲಿ ಬುಡಕಟ್ಟು ಜನಾಂಗಗಳಿಗೆ ಆರಾಧ್ಯ ದೈವವಾಗಿದೆ. ಸುತ್ತಲೂ ಬಯಲಿದ್ದು ಒಂದು ದೊಡ್ಡ ಆಲದ ಮರವಿದೆ. ಇದರ ಅಡಿಯಲ್ಲಿ 5.5 ಅಡಿ ಎತ್ತರದ 7.8 ಅಡಿ ಸುತ್ತಳತೆಯ ಒಂದು ದೊಡ್ಡದಾದ ಗುಂಡಿದೆ. ಆ ಗುಂಡಿನ ದಕ್ಷಿಣ ಭಾಗದ ಮುಖದಲ್ಲಿ ಎರಡು ಅಡಿ ಎತ್ತರ ಎರಡು ಅಡಿ ಅಗಲದ ಒಂದು ಗೂಡನ್ನು ಕೊರೆದಿದ್ದಾರೆ. ಅದರ ಗೋಡೆಯಲ್ಲಿ ಚಿಕ್ಕದಾದ 1.5 ಅಡಿ ಎತ್ತರದ ಹನುಮನ ವಿಗ್ರಹವನ್ನು ಕೆತ್ತಲಾಗಿದೆ. ಇದು ದಕ್ಷಿಣಾಭಿಮುಖವಾಗಿದೆ. ಹಾಗೂ ಅದರ ಸುತ್ತಲೂ ದೊಡ್ಡದಾದ ಮರಗಳಿವೆ. ಪಕ್ಕದಲ್ಲೇ ಒಂದು ಬಾವಿಯೂ ಇದೆ. ನೀರಿನ ಅನುಕೂಲಕ್ಕಾಗಿ ಹತ್ತಿರದಲ್ಲೇ ಒಂದು ಕೊಳವೆ ಬಾವಿ ಹಾಕಿಸಲಾಗಿದೆ.

ಗುಡಿಯ ಸುತ್ತ ನಾಲ್ಕೈದು ಕಲ್ಲಿನ ಮಂಟಪ,ಸಮುದಾಯ ಭವನ ಕಾಣಬಹುದು. ಹರಕೆ ಸಲ್ಲಿಸುವವರು ಹಾಗೂ ಜಾತ್ರಾ ಸಮಯದಲ್ಲಿ ಬರುವ



ಭಕ್ತಾದಿಗಳು ಅಡುಗೆ ಮಾಡಿಕೊಳ್ಳಲು ಇವುಗಳು ಸಹಕಾರಿಯಾಗಿವೆ. ದೇವಾಲಯದ ಮುಂದಿನ ಮರಕ್ಕೆ ಕಟ್ಟೆಯನ್ನು ಕಟ್ಟಲಾಗಿದೆ. ಈ ಭಾಗದಲ್ಲಿ ತುಂಬಾ ಪ್ರಸಿದ್ಧ ಪಡೆದ ದೇವಾಲಯಗಳಲ್ಲಿ ಇದೂ ಸಹ ಒಂದಾಗಿದೆ.

ವರ್ಷದ ಶ್ರಾವಣ ಮಾಸದಲ್ಲಿ ಜರುಗುವ ಸ್ವಾಮಿಯ ಜಾತ್ರಾ ಮಹೋತ್ಸವಕ್ಕೆ ಆಂಧ್ರ ಪ್ರದೇಶ ಹಾಗೂ ಕರ್ನಾಟಕದ ಮೂಲೆ ಮೂಲೆಗಳಿಂದಲೂ ಭಕ್ತಾದಿಗಳು ಆಗಮಿಸುತ್ತಾರೆ. ಪ್ರತೀ ಶನಿವಾರಗಳಂದು ಭಕ್ತಾದಿಗಳು ಸ್ವಾಮಿಗೆ ವಿಶೇಷ ಪೂಜೆ ಸಲ್ಲಿಸಿ ಬಂದವರೆಲ್ಲರಿಗೂ ಪ್ರಸಾದ ನೀಡುತ್ತಾರೆ.ಅಲ್ಲದೆ ಚೀಟಿ ಎಂದು ಬೇಟೆ ಎಲೆಯಿಂದ ಮಾಡಿದ್ದು ಪ್ರತಿಯೊಬ್ಬರು ಬಲಗೈಗೆ ಕಟ್ಟಿಸಿಕೊಳ್ಳುತ್ತಾರೆ.ವಿಶೇಷವಾಗಿ ಈ ಭಾಗದ ನವ ದಂಪತಿಗಳು ಅವರ ಪರಿವಾರದೊಂದಿಗೆಬಂದುಸ್ವಾಮಿಗೆಪೂಜೆ ಸಲ್ಲಿಸುತ್ತಾರೆ. ಸುತ್ತಮುತ್ತಲಿನ ಹಳ್ಳಿಯ ಜನರಿಗೇಆಗಲಿ,ಜಾನುವಾರುಗಳಿಗೇಆಗಲಿ ರೋಗರುಜನೆಗಳು ಬಂದೊದಗಿದಾಗ ಬಯಲಾಂಜಿನೆಯನಿಗೆ ಹರಕೆ ಸಲ್ಲಿಸಿದರೆ ಒಳ್ಳೆಯದಾಗುತ್ತದೆ ಎಂಬ ನಂಬಿಕೆ ಈ ಭಾಗದ ಜನರದಾಗಿದೆ.

ವಿಶೇಷ ಜಾತ್ರೆ : ಪ್ರತೀ ವರ್ಷದ ಶ್ರಾವಣ ಮಾಸದ ಹಾಗು ಪ್ರತಿ ಶನಿವಾರಗಳಂದು ಸಾವಿರಾರು ಭಕ್ತರು ಆಗಮಿಸಿ ಸ್ವಾಮಿಗೆ ಹರಕೆ ಸಲ್ಲಿಸುತ್ತಾರೆ. ವಿಶೇಷವಾಗಿ ಶ್ರಾವಣದ ಕೊನೆಯ ಶನಿವಾರದಂದು ಜಾತ್ರಾ ಮಹೋತ್ಸವ ಜರುಗುತ್ತದೆ. ಸುತ್ತಮುತ್ತಲಿನ ಹಳ್ಳಿಯ ಭಕ್ತಾದಿಗಳು ಎತ್ತಿನ ಗಾಡಿಗಳಲ್ಲಿ ಆಗಮಿಸಿ ವಿಶೇಷ ಅಡುಗೆ ತಯಾರಿಸಿ ಎಲ್ಲಾ ಭಕ್ತಾದಿಗಳಿಗೂ ಜಾತಿ ಬೇದವಿಲ್ಲದೆ ಬಡಿಸುವುದನ್ನು ವಿಶೇಷವಾಗಿ ಗಮನಿಸಬಹುದು. ಈ ಭಾಗದ ಪ್ರತೀ ಮನೆಯಲ್ಲಿ ಬೈಲಪ್ಪ, ಬೈಲಮ್ಮ, ಹನುಮ, ಹನುಮಪ್ಪ, ಆಂಜಿನೇಯ, ಬೈಲೇಶ ಹೀಗೆ ಸ್ವಾಮಿಯ ಹೆಸರನ್ನ ಎಲ್ಲಾ ಜಾತಿಯವರು ನಾಮಕರಣ ಮಾಡಿಕೊಳ್ಳುವುದನ್ನ ಕಾಣಬಹುದಾಗಿದೆ. ವೈಶಿಷ್ಟ್ಯತೆ ಹೊಂದಿರುವ ಈ ದೇವಾಲಯವನ್ನು ಸರ್ಕಾರ ಇನ್ನು ಹೆಚ್ಚಿನ ರೀತಿಯಲ್ಲಿ ಆಕರ್ಷಣೀಯ ಪ್ರವಾಸಿ/ಯಾತ್ರಾ ಸ್ಥಳವನ್ನಾಗಿ ಮಾಡಬೇಕೆಂಬುದು ಗ್ರಾಮ ಹಾಗು ಭಕ್ತಾದಿಗಳ ಬೇಡಿಕೆಯಾಗಿದೆ.

Printed by: GOVINDAPPA.T Published by: DARSHAN.T Owned by: DARSHAN.T and Printed at: ASHAYA PRINTERS No.94, C.M.C. Colony, Yangammana Katte, Chitradurga-577 501, Chitradurga Dist, Karnataka state. Published at : No. 55 Ingaladal Main Street, Near Canara Banak , Ingaladal Village, Ingaladal Post - 577524, Chitradurga Tq, Chitradurga Dist, Karnataka state. Editor : DARSHAN.T